24 October 2026 Saturday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ವರ್ತಮಾನ

ಸಂಪಾದಕ: ಕೆ.ಎನ್.ರವಿ

info.varthaman@gmail.com

ಭವಿಷ್ಯದ ಮುನ್ನುಡಿ

ಭಾವನಾಂತರಂಗ

ಕಷ್ಟಗಳಿಂದ ಮನಸ್ಸು ಗಟ್ಟಿಯಾಗುತ್ತದೆ, ಹಿಂಜರಿಕೆ ಎನ್ನುವುದು ನಮ್ಮಿಂದ ದೂರ ಓಡಿ ಹೋಗುತ್ತದೆ!

ಸ್ನೇಹಾ ಆನಂದ್

ಮೈಸೂರು: ರಾಶಿ ರಾಶಿ ಕಸ: ಸಚಿವರ ನೇತೃತ್ವದಲ್ಲೇ ವಿಲೇವಾರಿ ಪುಟ ಸಂ. 2

ಪುಟ ಸಂ. 3 ಸಮುದಾಯಗಳ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸಿ

ಬೌದ್ಧ ಸಮ್ಮೇಳನದ ಯಶಸ್ಸಿಗೆ ಸಹಕರಿಸಿ: ಸಚಿವ ಸಿ.ಪುಟ್ಟರಂಗಶೆಟ್ಟಿ ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು

ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 303 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

ಆಪರೇಷನ್ ಸಿದ್ದರಾಮಯ್ಯ

ಕಾಂಗ್ರೆಸ್ ನಾಯಕರಿಂದಲೇ ಸ್ಟಿಂಗ್ । ಯತೀಂದ್ರ ಸ್ಫೋಟಕ ಹೇಳಿಕೆ

ಮೈಸೂರು: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬ್ಲಾಕ್‌ಮೇಲ್ ಮಾಡುವ ಸಲುವಾಗಿ ಸ್ಟಿಂಗ್ ಆಪರೇಷನ್ ನಡೆಸಲಾಗಿದೆ. ನಮ್ಮ ಕಾಂಗ್ರೆಸ್ ಪಕ್ಷದವರೇ ಇದರಲ್ಲಿ ಭಾಗಿ ಆಗಿದ್ದಾರೆ ಎಂದು ಸಚಿವ ಯತೀಂದ್ರ ಸಿದ್ದರಾಮಯ್ಯ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ನಗರದಲ್ಲಿ ಶುಕ್ರವಾರ ಸ್ಟಿಂಗ್ ಪ್ರಕರಣದ ಬಗ್ಗೆ ಮಾತನಾಡಿದ ಯತೀಂದ್ರ, ಸ್ಟಿಂಗ್ ಪ್ರಕರಣದಲ್ಲಿ ಪತ್ರಕರ್ತ ಸೇರಿ ಇಬ್ಬರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ಮಾಡಿದ್ದಾರೆ ಎಂದರು.

ಸಿದ್ದರಾಮಯ್ಯ ಅವರಿಗೆ ಬ್ಲಾಕ್‌ಮೇಲ್ ಮಾಡುವ ಯತ್ನ ನಡೆದಿದೆ. ಸಿದ್ದರಾಮಯ್ಯ ಹೆಸರು ಕೆಡಿಸಲು ಸ್ಟಿಂಗ್ ವಿಚಾರ ಮುನ್ನೆಲೆಗೆ ತಂದಿದ್ದಾರೆ. ಸಿದ್ದರಾಮಯ್ಯ ಅವರನ್ನು ತೇಜೋವಧೆ ಮಾಡಿ ಅವರ ಲೆಗಸಿ ಹಾಳು ಮಾಡಿ ಬ್ಲಾಕ್‌ಮೇಲ್ ಮಾಡುವ ಪ್ರಯತ್ನ ನಡೆದಿದೆ. ಸ್ಟಿಂಗ್ ಪ್ರಕರಣದಲ್ಲಿ ಕಾಂಗ್ರೆಸ್‌ನ ಒಬ್ಬ ಮಹಿಳೆ ಇದ್ದಾರೆ ಎಂದು ಹೇಳಿದರು.

ಈ ಸ್ಟಿಂಗ್ ವಿಡಿಯೋದಲ್ಲಿ ತಮ್ಮ ಪಕ್ಷದವರೇ ಭಾಗಿಯಾಗಿರುವುದು ಮೇಲ್ನೋಟಕ್ಕೆ ಗೊತ್ತಾಗುತ್ತಿದೆ ಎಂದು ಯತೀಂದ್ರ ಸಿದ್ದರಾಮಯ್ಯ ಒಪ್ಪಿಕೊಂಡಿದ್ದಾರೆ. ಅಲ್ಲದೆ, ಒಬ್ಬ ಮಾಧ್ಯಮ ಮುಖ್ಯಸ್ಥರೂ ಸಹ ಇದರಲ್ಲಿ ಕಾಣಿಸಿಕೊಂಡಿದ್ದಾರೆ ಎಂಬುದನ್ನು ವಿಡಿಯೋ ಸ್ಪಷ್ಟಪಡಿಸುತ್ತದೆ. ಆದರೆ, ಒಬ್ಬ ವ್ಯಕ್ತಿ ಮಾಡಿದ ತಪ್ಪಿಗೆ ಇಡೀ ಪಕ್ಷವನ್ನು ದೂಷಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಸ್ಟಿಂಗ್ ಮಾಡಿ ಟಿಕೆಟ್‌ಗೆ ಬ್ಲಾಕ್‌ಮೇಲ್ ಮಾಡಲು ಯತ್ನಿಸಿದ್ದಾರೆ. ತಂದೆ ಬೇಜಾರಾಗಿದ್ದಾರೆ. 40 ವರ್ಷ ಕಳಂಕ ಇಲ್ಲದೇ ರಾಜಕಾರಣ ಮಾಡಿದ್ದಾರೆ. ಸತ್ಯ ನಮ್ಮ ಕಡೆ ಇದೆ. ಸತ್ಯ ಹೊರಗೆ ಬರುತ್ತೆ ಎಂದರು

ಈ ಸ್ಟಿಂಗ್ ಆಪರೇಷನ್ ಹಿಂದೆ ಯಾರು ಇದ್ದಾರೆ, ನಮ್ಮ ಪಕ್ಷದವರೇ ಮಾಡಿದ್ದಾರೆಯೇ ಅಥವಾ ಬೇರೆಯವರ ಕೈವಾಡವಿದೆಯೇ ಎಂಬುದು ತನಿಖೆಯಿಂದ ಹೊರಬರಬೇಕು ಎಂದು ಅವರು ಹೇಳಿದರು. ಸ್ಟಿಂಗ್ ವಿಡಿಯೋದಲ್ಲಿ ಕಾಣಿಸಿಕೊಂಡಿರುವ ಮಹಿಳೆಯೊಬ್ಬರು ಪುತ್ತೂರು ಟಿಕೆಟ್ ಆಕಾಂಕ್ಷಿಯಾಗಿದ್ದರು ಎಂಬ ಮಾಹಿತಿ ಇದೆ. ಈ ರಾಜಕೀಯ ಲಾಭಕ್ಕಾಗಿ ಮತ್ತು ಸಿದ್ದರಾಮಯ್ಯ ಹೆಸರನ್ನು ಕೆಡಿಸಲು ಈ ರೀತಿಯ ಕೃತ್ಯಕ್ಕೆ ಮುಂದಾಗಿರುವುದು ಸ್ಪಷ್ಟವಾಗಿ ಗೋಚರಿಸುತ್ತದೆ ಎಂದು ತಿಳಿಸಿದರು.

ತನಿಖೆ ಬಗ್ಗೆ ನಂಬಿಕೆ ಇದೆ: ಪ್ರಕರಣದಲ್ಲಿ ಯಾರೇ ಇದ್ದರೂ ಅರೆಸ್ಟ್ ಮಾಡಿಲು ಸಿದ್ದರಾಮಯ್ಯ ಹೇಳಿದ್ದಾರೆ. ನಮ್ಮ ಸರ್ಕಾರದ ತನಿಖೆ ಮೇಲೆ ನಂಬಿಕೆ ಇದೆ. ತನಿಖೆ ಸರಿಯಾಗಿ ನಡೆಯುತ್ತಿದೆ. ಆಕಸ್ಮಾತ್ ತನಿಖೆ ಸರಿಯಾಗಿ ನಡೆಯಲಿಲ್ಲ ಅಂದರೆ ಉನ್ನತ ಮಟ್ಟದ ತನಿಖೆಗೆ ಒತ್ತಾಯಿಸುತ್ತೇವೆ ಎಂದು ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು. ಸಿದ್ದರಾಮಯ್ಯ ಘನತೆಯನ್ನು ಹಾಳುಮಾಡಲು, ಅವರ ರಾಜಕೀಯ ಜೀವನಕ್ಕೆ ಕಪ್ಪು ಚುಕ್ಕೆ ಇಡಲು ಮತ್ತು ಬ್ಲಾಕ್‌ಮೇಲ್ ಮಾಡಲು ಈ ಯತ್ನ ನಡೆದಿದೆ ಎಂದು ಯತೀಂದ್ರ ಆರೋಪಿಸಿದರು.

ನನ್ನ ವಿರುದ್ಧ ವ್ಯವಸ್ಥಿತ ಪಿತೂರಿ

ಕೃಪಾ ಆಳ್ವಾ, ರಾಕೇಶ್ ಶೆಟ್ಟಿ ಸೇರಿ ಸ್ಟಿಂಗ್: ಸಿದ್ದರಾಮಯ್ಯ ಕಿಡಿ

ಮೈಸೂರು: ಮಂಗಳೂರಿನ ಕಾಂಗ್ರೆಸ್ ನಾಯಕಿ ಕೃಪಾ ಆಳ್ವಾ ಮತ್ತು ಪವರ್ ಟಿವಿ ಮುಖ್ಯಸ್ಥ ರಾಕೇಶ್ ಶೆಟ್ಟಿ ಸೇರಿ ಸ್ಟಿಂಗ್ ಆಪರೇಷನ್ ಮಾಡಿದ್ದಾರೆ. ಆದರೆ, ಅದರಲ್ಲಿ ಸತ್ಯಾಂಶ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ನಗರದಲ್ಲಿ ಶುಕ್ರವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ನನ್ನ ವಿರುದ್ಧ ವ್ಯವಸ್ಥಿತವಾಗಿ ಪಿತೂರಿ ನಡೆಸಲಾಗಿದೆ. ಅದರ ಭಾಗವೇ ಸ್ಟಿಂಗ್ ಆಪರೇಷನ್ ಪ್ರಕರಣ. ಅದು ಸುಳ್ಳು ಕೇಸ್. ಬ್ಲಾಕ್‌ಮೇಲ್‌ಗೆ ಮಾಡಿರುವಂಥದು. ಇದರ ಹಿಂದೆ ಯಾರಿದ್ದಾರೆ ಎಂಬುದು ಗೊತ್ತಾಗಲೆಂದು, ಇದು ಸುಳ್ಳು ಕೇಸ್ ಎಂಬುದು ತಿಳಿಯಲೆಂದು ಮತ್ತು ಸತ್ಯ ಹೊರಬರಲೆಂದೇ ನಾನೇ ಪೊಲೀಸರಿಗೆ ದೂರು ನೀಡಿದ್ದೇನೆ ಎಂದು ಹೇಳಿದರು.

ಸ್ಟಿಂಗ್ ನಾನೇ ಮಾಡಿದ್ದೆಂದು ರಾಕೇಶ್ ಶೆಟ್ಟಿಯೇ ಒಪ್ಪಿಕೊಂಡಿದ್ದಾನೆ. ಈ ಬಗ್ಗೆ ತನಿಖೆ ನಡೆಯುತ್ತಿದೆ. ಸುಳ್ಳು ಪ್ರಕರಣದ ಬಗ್ಗೆ ಹೆಚ್ಚು ಪ್ರಚಾರ ಆಗದಿರಲೆಂದು ಸಿವಿಲ್ ಕೋರ್ಟ್‌ಗೆ ಹೋಗಿ ನಿರ್ಬಂಧಕಾಜ್ಞೆ ತಂದಿದ್ದೇನೆ ಎಂದು ತಿಳಿಸಿದರು.

ಎಚ್‌ಡಿಕೆ ನನ್ನ ಪರ ಬೇಕಿಲ್ಲ!

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ನನ್ನ ಪರ ಇರುವುದು ಯಾರಿಗೆ ಬೇಕು? ಯಾರೂ ನನ್ನ ಪರ ಇರಬೇಕಾದ ಅಗತ್ಯವಿಲ್ಲ. ಜನರು ಹಾಗೂ ಇಡೀ ರಾಜ್ಯಕ್ಕೆ ಇದು ಸುಳ್ಳು ಕೇಸ್ ಎಂಬ ಸತ್ಯ ಗೊತ್ತಾಗಬೇಕಷ್ಟೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಿಡಿಕಾರಿದರು. ಏನೂ ನಡೆದೇ ಇಲ್ಲದಿರುವಾಗ ಬೇಸರವೇಕೆ ಆಗುತ್ತದೆ? ಸತ್ಯ ನನಗೆ ಗೊತ್ತಿದೆಯಲ್ಲ? ಸಂಪೂರ್ಣವಾದ ಸುಳ್ಳು ಕೇಸ್ ಇದು. ಅಧಿಕಾರ ಹೋದ ಮೇಲೆ ನನ್ನ ವಿರುದ್ಧ ಪಿತೂರಿಗೆ ಯತ್ನಿಸಿದ್ದಾರೆ. ಅವರ ಉದ್ದೇಶ ಸಫಲವಾಗುವುದಿಲ್ಲ ಎಂದು ತಿರುಗೇಟು ನೀಡಿದರು.

ಈಗ ಬೇರೆ ಸರ್ಕಾರ ಅಲ್ಲವೇ?

ಮೈಸೂರು ದಸರಾ ಸಂದರ್ಭದಲ್ಲಿ ದಿನವೊಂದಕ್ಕೆ ಮೂವರು ಸಚಿವರಿಗೆ ಜವಾಬ್ದಾರಿ ಕೊಟ್ಟಿದ್ದರು. ಆ ಸಚಿವರು ದಸರಾ ಉಸ್ತುವಾರಿಗೆ ಸರಿಯಾಗಿ ಇಲ್ಲಿಗೆ ಬರಲೇ ಇಲ್ಲ. ನನ್ನ ಪ್ರಕಾರ, ಆ ರೀತಿ ಮಾಡುವ ಅಗತ್ಯವಿರಲಿಲ್ಲ. ಆದರೆ, ಮುಖ್ಯಮಂತ್ರಿ ಮಾಡಿದ್ದರು. ಈಗ ಸರ್ಕಾರವೇ ಬೇರೆಯಲ್ಲವೇ? ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಮಿಕವಾಗಿ ಪ್ರಶ್ನಿಸಿದರು. ದಸರಾ ಸಂಬಂಧಿಸಿದಂತೆ ಮಗ ಯತೀಂದ್ರಗೆ ನಾನೇನೂ ಸಲಹೆ ಕೊಟ್ಟಿರಲಿಲ್ಲ. ಅವನೇ ಎಲ್ಲವನ್ನೂ ಮಾಡುತ್ತಾನೆ ಎಂದರು.

ನಾನು ಎಂಟು ವರ್ಷ ಮುಖ್ಯಮಂತ್ರಿ ಆಗಿದ್ದವನು. ಆಗ ಇಂಥದ್ಯಾವುದೂ ನಡೆದಿಲ್ಲ. ಈಗ ಮಾಡುತ್ತಿದ್ದಾರೆ. ಇದೆಲ್ಲವೂ ಜನರಿಗೆ ಗೊತ್ತಾಗಲೆಂದು ನಾನು ದೂರು ಕೊಟ್ಟಿದ್ದೇನೆ ಎಂದು ಸಿದ್ದರಾಮಯ್ಯ ಹೇಳಿದರು.

ನನ್ನ ಮೇಲೆ ಕಪ್ಪುಚುಕ್ಕೆ ತರಲು ಪ್ರಯತ್ನಿಸಿದರೂ ಜನರು ನಂಬುವುದಿಲ್ಲ. ತನಿಖೆ ನಡೆಯುತ್ತಿರುವ ಬಗ್ಗೆ ಪುಟ 2ಕ್ಕೆ

ಸಿಎಂ ಪತ್ನಿ ಉಷಾ ಪುಷ್ಪಾರ್ಚನೆ ಮಾಡಿದರೆ ತಪ್ಪೇನಿಲ್ಲ: ಯತೀಂದ್ರ

ಮೈಸೂರು: ಮೈಸೂರು ದಸರಾ ಇತಿಹಾಸದಲ್ಲಿ ಮೊದಲ ಬಾರಿಗೆ ಸಿಎಂ ಡಿ.ಕೆ.ಶಿವಕುಮಾರ್ ಪತ್ನಿ ಪುಷ್ಪಾರ್ಚನೆ ಮಾಡಿರುವುದು ಶಿಷ್ಟಾಚಾರದ ಉಲ್ಲಂಘನೆ ಎಂಬ ವಿವಾದ ಕೇಳಿಬಂದಿದೆ.

ಈ ಸಂಬಂಧ ಪ್ರತಿಕ್ರಿಯಿಸಿದ ಸಚಿವ ಯತೀಂದ್ರ ಸಿದ್ದರಾಮಯ್ಯ, ಶಿಷ್ಟಾಚಾರ ಪಟ್ಟಿಯಲ್ಲಿ ಮುಖ್ಯಮಂತ್ರಿ ಪತ್ನಿ ಹೆಸರು ಇರಲಿಲ್ಲ ಎಂದು ಸ್ಪಷ್ಟಪಡಿಸಿದರು. ಆದರೂ ಸಿಎಂ ಪತ್ನಿ ಉಷಾ ಶಿವಕುಮಾರ್ ಅವರು ಪುಷ್ಪಾರ್ಚನೆ ಮಾಡಿರುವುದು ತಪ್ಪೇನಿಲ್ಲ. ಅವರು ದೇವಿಗೆ ಪುಷ್ಪಾರ್ಚನೆ ಮಾಡಿದ್ದಾರೆ ಅಷ್ಟೇ. ಸರ್ಕಾರದ ಕೆಲಸವನ್ನೇನು ಮಾಡಿಲ್ಲ ಅಲ್ಲವೇ? ಹೀಗಾಗಿ ಶಿಷ್ಟಾಚಾರ ಉಲ್ಲಂಘನೆಯಾದರೂ ತಪ್ಪೇನಿಲ್ಲ ಎಂದು ಸಮರ್ಥನೆ ಮಾಡಿಕೊಂಡಿದ್ದಾರೆ.

ನಂದಿಧ್ವಜ ಪೂಜೆ ವೇಳೆ ಸಚಿವರನ್ನು ತಡೆದ ವಿಚಾರ ಕುರಿತು ಮಾತನಾಡಿ, ಸಚಿವರನ್ನು ತಡೆಯಬಾರದಿತ್ತು. ಐಜಿಪಿ ದರ್ಜೆ ಅಧಿಕಾರಿ ಯಾಕೆ ಈ ರೀತಿ ಮಾಡಿದರು ಎಂದು ಗೊತ್ತಿಲ್ಲ. ಪೊಲೀಸರು ಓವರ್ ಆಗಿ ವರ್ತಿಸಿದ್ದಾರೆ. ಸರ್ಕಾರ ತನಿಖೆಗೆ ಸೂಚನೆ ನೀಡಿದೆ. ತನಿಖೆ ನಡೆಯುತ್ತಿದೆ. ಶಿಷ್ಟಾಚಾರದ ಪ್ರಕಾರ ಮಂತ್ರಿಗಳನ್ನು ತಡೆಯಬಾರದಿತ್ತು ಎಂದು ಹೇಳಿದರು.

ಸಚಿವರನ್ನು ತಡೆಯಲು ಯಾರಾದರೂ ಸೂಚನೆ ಕೊಟಿದ್ದಾರೆಯೇ ಎಂಬ ಪ್ರಶ್ನೆಗೆ ಉತ್ತರಿಸಿ, ಈ ಬಗ್ಗೆ ನನಗೆ ಗೊತ್ತಿಲ್ಲ. ಈ ವಿಚಾರವಾಗಿ ತನಿಖೆ ಪುಟ 2ಕ್ಕೆ

ಕರ್ನಾಟಕಕ್ಕೆ ಕಾವೇರಿ ಶಾಕ್

ತಮಿಳುನಾಡಿಗೆ ನಿತ್ಯ 3 ಸಾವಿರ ಕ್ಯೂಸೆಕ್ ನೀರು ಬಿಡಲು ಆದೇಶ

ನವದೆಹಲಿ: ತಮಿಳುನಾಡಿಗೆ ನಿತ್ಯ 3 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ಶಿಫಾರಸು ಮಾಡಿದೆ.

ನವದೆಹಲಿಯಲ್ಲಿ ಶುಕ್ರವಾರ ನಡೆದ ಸಮಿತಿ ಸಭೆಯಲ್ಲಿ ಕರ್ನಾಟಕ ಹಾಗೂ ತಮಿಳುನಾಡು ರಾಜ್ಯಗಳ ನೀರಿನ ಸ್ಥಿತಗತಿ ಮಾಹಿತಿ ಪಡೆಯಲಾಯಿತು. ಕರ್ನಾಟಕ ಈವರೆಗೂ ತನ್ನ ಪಾಲಿನ ನೀರನ್ನು ಸಂಪೂರ್ಣ ಬಿಡುಗಡೆ ಮಾಡಿಲ್ಲ. ಹೆಚ್ಚಿನ ನೀರು ಹರಿಸಲು ಕ್ರಮ ವಹಿಸಬೇಕು ಎಂದು ತಮಿಳುನಾಡು ಮನವಿ ಸಲ್ಲಿಸಿತು.

ಕರ್ನಾಟಕದಿಂದ ಈಗಾಗಲೇ ಹೆಚ್ಚಿನ ನೀರನ್ನು ತಮಿಳುನಾಡಿಗೆ ಕಾವೇರಿ ನದಿ ಮೂಲಕ ಹರಿಸಲಾಗಿದೆ. ಸದ್ಯ ನಮ್ಮಲ್ಲಿ ಮಳೆ ಕೊರತೆಯಿಂದ ಜಲಾಶಯಗಳಲ್ಲಿ ನೀರಿನ ಪ್ರಮಾಣ ಕಡಿಮೆ ಇರುವುದರಿಂದ ನೀರು ಹರಿಸುವುದು ಕಷ್ಟ ಎಂದು ಕರ್ನಾಟಕ ವಾದಿಸಿತು.

ಎರಡು ಕಡೆ ವಾದ ಆಲಿಸಿದ ಸಮಿತಿ ಪ್ರತಿದಿನ ತಮಿಳುನಾಡಿಗೆ 3 ಸಾವಿರ ಕ್ಯುಸೆಕ್ ನೀರು ಹರಿಸಬೇಕು. ಅದರಲ್ಲೂ 15 ದಿನಗಳ ಕಾಲ ಒಟ್ಟು 3 ಟಿಎಂಸಿ ಅಡಿ ನೀರು ಹರಿಸಬೇಕು ಎಂದು ನಿರ್ದೇಶನ ನೀಡಿದೆ.

ದೊಡ್ಡಬಳ್ಳಾಪುರದಲ್ಲಿ ಲಘು ಭೂಕಂಪನ

ಬೆಂಗಳೂರು: ದೊಡ್ಡಬಳ್ಳಾಪುರ ತಾಲೂಕಿನಲ್ಲಿ ಶುಕ್ರವಾರ ಬೆಳಗ್ಗೆ 9 ಗಂಟೆ 1 ನಿಮಿಷ 59 ಸೆಕೆಂಡಿಗೆ ಲಘು ಭೂಕಂಪನ ಸಂಭವಿಸಿದೆ. ರಿಕ್ಟರ್ ಮಾಪಕದಲ್ಲಿ 3.0 ತೀವ್ರತೆ ದಾಖಲಾಗಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮತ್ತು ರಾಷ್ಟ್ರೀಯ ಭೂಕಂಪನ ಕೇಂದ್ರವು ಈ ಬಗ್ಗೆ ಅಧಿಕೃತ ವರದಿ ಪ್ರಕಟಿಸಿದೆ.

ದೊಡ್ಡಬಳ್ಳಾಪುರ ತಾಲೂಕಿನ ತೂಬಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಿಮ್ಮೋಜನಹಳ್ಳಿ ಗ್ರಾಮದಿಂದ ಸುಮಾರು 500 ಮೀಟರ್ ಉತ್ತರಕ್ಕೆ ಭೂಕಂಪನದ ಕೇಂದ್ರ ಬಿಂದು ಪತ್ತೆಯಾಗಿದೆ. ಇದರ ಆಸುಪಾಸಿನಲ್ಲಿ ನರಗಾನಹಳ್ಳಿ ಮತ್ತು ಕರ್ನಾಲ ಗ್ರಾಮಗಳಿವೆ. ಭೂಮಿಯ ಮೇಲ್ಮೈನಿಂದ ಸುಮಾರು 10 ಕಿಲೋಮೀಟರ್ ಆಳದಲ್ಲಿ ಈ ಭೂಕಂಪನ ಸಂಭವಿಸಿದೆ. ಕೇಂದ್ರ ಬಿಂದುವಿನಿಂದ ಸುಮಾರು 20ರಿಂದ 30 ಕಿಲೋಮೀಟರ್ ವ್ಯಾಪ್ತಿಯಲ್ಲಿ ಲಘು ಕಂಪನದ ಅನುಭವವಾಗಿದೆ.

ಕೆಲವೇ ಸೆಕೆಂಡುಗಳ ಕಾಲ ಸ್ಥಳೀಯವಾಗಿ ಸಣ್ಣ ಪ್ರಮಾಣದ ನಡುಕ ಉಂಟಾಗಿದ್ದರಿಂದ ನಿವಾಸಿಗಳಲ್ಲಿ ಕೆಲಕಾಲ ಆತಂಕ ಮೂಡಿತ್ತು. ಈ ಭೂಕಂಪನದ ತೀವ್ರತೆ ತೀರಾ ಕಡಿಮೆಯಾಗಿದ್ದರಿಂದ ಯಾವುದೇ ಪ್ರಾಣಹಾನಿ ಅಥವಾ ಆಸ್ತಿಪಾಸ್ತಿ ನಷ್ಟ ಸಂಭವಿಸಿಲ್ಲ.

ಸಿದ್ದು ವರ್ಚಸ್ಸು ಹಾಳು ಮಾಡಲು ಡಿಕೆಶಿ ಸಂಚು

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಾಗ್ದಾಳಿ

ಬೆಂಗಳೂರು: ಸಿದ್ದರಾಮಯ್ಯ ವರ್ಚಸ್ಸನ್ನು ನಾವು ಹಾಳು ಮಾಡಿಲ್ಲ. ಬದಲಿಗೆ ಅವರ ವರ್ಚಸ್ಸು ಮುಗಿಸಲು ಸಂಚು ಮಾಡುತ್ತಿರುವುದು ನೀವು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ಧ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.

ಬೆಂಗಳೂರಿನಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸಿದ್ದರಾಮಯ್ಯ ಪರವಾಗಿ ಮಮತೆ ಯಾಕೆ ಎಂಬ ಹೇಳಿಕೆಗೆ ಅವರು ಸ್ಪಷ್ಟನೆ ನೀಡಿದರು. ಸಿದ್ದರಾಮಯ್ಯ ವಿರುದ್ಧ ನಮ್ಮ ಭಿನ್ನಾಭಿಪ್ರಾಯ ಇದೆ. ಆದರೆ, ಸ್ಟಿಂಗ್ ಆಪರೇಷನ್ ಜೆಡಿಎಸ್ ರೂಪಿಸಿದ ಸಂಚಲ್ಲ. ಅದನ್ನು ನೀವೇ ಮಾಡುತ್ತಿದ್ದೀರಿ ಎಂದು ಟೀಕಿಸಿದರು.

ಕಾಂಗ್ರೆಸ್‌ನಲ್ಲಿ ಓಟ್ ತರಲು ಈಗ ಸಿದ್ದರಾಮಯ್ಯ ಬಿಟ್ಟರೆ ಯಾವ ನಾಯಕರಿದ್ದಾರೆ. ಅವರನ್ನು ಪುಟ 2ಕ್ಕೆ

ಕರ್ನಾಟಕಕ್ಕೆ ಬರಲು ಉದ್ಯಮಿಗಳಿಗೂ ಭಯ!

ಬೆಂಗಳೂರು: ಕರ್ನಾಟಕಕ್ಕೆ ಬರಲು ಉದ್ಯಮಿಗಳು ಭಯ ಬೀಳ್ತಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದರು.

ಕೇಂದ್ರ ಕೈಗಾರಿಕೆ ಸಚಿವರಾಗಿ ಸಾಕ್ಷಿ ಗುಡ್ಡೆ ಬಿಟ್ಟು ಹೋಗಿ ಎನ್ನುತ್ತಾರೆ ಸಿಎಂ ಡಿಕೆಶಿ. ಆದರೆ, ಉದ್ಯಮಿಗಳಿಗೆ ಕರ್ನಾಟಕಕ್ಕೆ ಹೋಗಿ ಎಂದರೆ ಕೈಮುಗಿಯುತ್ತಾರೆ. ಹಿಂದೆ ಕರ್ನಾಟಕಕ್ಕೆ ಉದ್ಯಮಿಗಳು ಬರುತ್ತಿದ್ದರು. ಆದರೆ ಈಗ ಯಾರೂ ಬರುತ್ತಿಲ್ಲ. ಕರ್ನಾಟಕ ಎಂದರೆ ಉದ್ಯಮಿಗಳು ಭಯ ಬೀಳುತ್ತಾರೆ. 974 ಅರ್ಜಿಗಳಿಗೆ ಇನ್ನೂ ಕ್ಲಿಯರೆನ್ಸ್ ನೀಡಿಲ್ಲ. ಹಾಗಿರುವಾಗ ಯಾಕಾಗಿ ಕರ್ನಾಟಕಕ್ಕೆ ಉದ್ಯಮಿಗಳು ಬರುತ್ತಾರೆ? ಎಂದು ಪ್ರಶ್ನಿಸಿದರು.

ಮಾಧ್ಯಮ ಸಂಸ್ಥೆಯ ವಿಕ್ಕಿ ಅನುಮಾಸ್ಪದ ಸಾವು?

ಖಾಸಗಿ ಮಾಧ್ಯಮ ಸಂಸ್ಥೆ ಮುಖ್ಯಸ್ಥನ ಜೊತೆ ಕೆಲಸ ಮಾಡುತ್ತಿದ್ದ ವಿಕ್ಕಿ ಎಂಬ ವ್ಯಕ್ತಿ ಅನುಮಾಸ್ಪದವಾಗಿ ಸತ್ತಿದ್ದಾನೆ. ಆದರೆ, ಪೊಲೀಸರು ಯುಡಿಆರ್ ಮಾಡಿದ್ದಾರೆ. ಅಸಹಜ ಸಾವು ಅಂದಿದ್ದಾರೆ. ಸ್ಟಿಂಗ್ ಪ್ರಕರಣಕ್ಕೂ ವಿಕ್ಕಿಗೂ ಸಂಬಂಧ ಇರುವ ಆಗಿದೆ. ಆದರೂ ಇಷ್ಟೆಲ್ಲಾ ಆರೋಪ ಇರುವ ವ್ಯಕ್ತಿಯನ್ನು ಸುಮ್ಮನೇ ಹೊರಗೆ ಬಿಟ್ಟಿದ್ದೀರಾ ಎಂದು ಎಚ್.ಡಿ. ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು. ಪುಟ 2ಕ್ಕೆ

ಮೋದಿ ಪ್ರಧಾನಿ ಆಗಲು ಕೈ ಕೊಡುಗೆ ಕಾರಣ: ಡಿಕೆಶಿ

ಬೆಂಗಳೂರು: ದೇಶದಲ್ಲಿ ಕಾಂಗ್ರೆಸ್‌ಗೆ ದೊಡ್ಡ ಇತಿಹಾಸವಿದೆ. ಕಾಂಗ್ರೆಸ್ ಇಲ್ಲದಿದ್ದರೆ ಈ ದೇಶ ಪ್ರಜಾಪ್ರಭುತ್ವವನ್ನು ಕಾಣುತ್ತಿರಲಿಲ್ಲ. ಇಂದು ಮೋದಿ ಪ್ರಧಾನಿ ಈ ಸ್ಥಾನದಲ್ಲಿರಲು ಕೂಡ ಭಾರತದ ನಾಯಕತ್ವ ಮತ್ತು ಪ್ರಜಾಪ್ರಭುತ್ವಕ್ಕೆ ಕಾಂಗ್ರೆಸ್ ನೀಡಿರುವ ಕೊಡುಗೆ ಕಾರಣ. ಬೇರುಗಳನ್ನು ಮರೆತರೆ ಫಲ ಸಿಗುವುದಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ಕಾಂಗ್ರೆಸ್ ನಾಯಕ ರಾಹುಲ್

ಆಸ್ಪತ್ರೆಯಲ್ಲಿ ನೂತನ ವೈದ್ಯಕೀಯ ಯಂತ್ರಗಳ ಉದ್ಘಾಟನೆ

ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಅವರಿಂದ ಸಿ-ಆರ್ಮ್ ಎಕ್ಸ್-ರೇ, ಅಲ್ಟ್ರಾಸೌಂಡ್, ಡಯಾಲಿಸಿಸ್ ಯಂತ್ರಗಳ ಸೇವೆಗೆ ಚಾಲನೆ

ಗುಂಡ್ಲುಪೇಟೆ: ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ನೂತನವಾಗಿ ಅಳವಡಿಸಲಾಗಿರುವ ಸಿ-ಆರ್ಮ್ ಎಕ್ಸ್-ರೇ, ಅಲ್ಟ್ರಾಸೌಂಡ್ ಹಾಗೂ ಡಯಾಲಿಸಿಸ್ ಯಂತ್ರಗಳನ್ನು ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಅವರು ಉದ್ಘಾಟಿಸಿ ಸಾರ್ವಜನಿಕರ ಸೇವೆಗೆ ಸಮರ್ಪಿಸಿದರು.

ಜಿಲ್ಲಾ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಜಿಲ್ಲಾ ಖನಿಜ ನಿಧಿ ಟ್ರಸ್ಟ್ ವತಿಯಿಂದ ಸಿ-ಆರ್ಮ್ ಎಕ್ಸ್-ರೇ ಯಂತ್ರವನ್ನು ಒದಗಿಸಲಾಗಿದೆ. ರಾಜ್ಯ ಸರ್ಕಾರದ ಅನುದಾನದಡಿ ಅಲ್ಟ್ರಾಸೌಂಡ್ ಯಂತ್ರವನ್ನು ಹಾಗೂ ನೆಫ್ರೋಪ್ಲಸ್ ಸಂಸ್ಥೆಯ ವತಿಯಿಂದ ಡಯಾಲಿಸಿಸ್ ಯಂತ್ರವನ್ನು ಕಲ್ಪಿಸಲಾಗಿದೆ.

ಆಸ್ಪತ್ರೆಯಲ್ಲಿ ನೂತನ ವೈದ್ಯಕೀಯ ಉಪಕರಣಗಳ ಸೌಲಭ್ಯ ದೊರೆತಿರುವುದರಿಂದ ರೋಗಿಗಳಿಗೆ ಅಗತ್ಯವಾದ ಪರೀಕ್ಷೆ ಮತ್ತು ಚಿಕಿತ್ಸಾ ಸೇವೆಗಳನ್ನು ಒದಗಿಸಲು ಅನುಕೂಲವಾಗಲಿದೆ ತಾಲೂಕಿನ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶದ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಲಭ್ಯವಾಗುವ ನಿಟ್ಟಿನಲ್ಲಿ ಈ ಸೌಲಭ್ಯಗಳು ಮಹತ್ವ ಪಡೆದಿವೆ.

ಸಾರ್ವಜನಿಕ ಆರೋಗ್ಯ ಸೇವೆಗಳನ್ನು ಬಲಪಡಿಸುವ ಉದ್ದೇಶದಿಂದ ಸರ್ಕಾರದ ಅನುದಾನ, ಜಿಲ್ಲಾ ಖನಿಜ ನಿಧಿ ಹಾಗೂ ಖಾಸಗಿ ಸಂಸ್ಥೆಗಳ ಸಹಕಾರದೊಂದಿಗೆ ವೈದ್ಯಕೀಯ ಸೌಲಭ್ಯಗಳನ್ನು ಹೆಚ್ಚಿಸಿರುವುದು ಗಮನಾರ್ಹವಾಗಿದೆ ಎಂದರು ಈ ಸಂದರ್ಭದಲ್ಲಿ ಸಹಾಯಕ ವೈದ್ಯಾಧಿಕಾರಿ ಡಾ. ಮಂಜುನಾಥ್ ಜಿ., ಸಹಾಯಕ ಆಡಳಿತಾಧಿಕಾರಿ ಲಿಂಗರಾಜು, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಅಲಿಮ್ ಪಾಷಾ, ಡಾ. ರವಿಕುಮಾರ್, ಡಾ. ಮಹೇಶ್, ಡಾ. ಶಿವಕುಮಾರ್, ಡಾ. ಉಲ್ಲಾಸ್, ಡಾ. ಶುಭಾಷಿಣಿ ಹಾಗೂ ಆರೋಗ್ಯ ರಕ್ಷಾ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ಸಾಮಾಜಿಕ ನ್ಯಾಯಕ್ಕಾಗಿ ಒತ್ತಾಯ

ಗುಂಡ್ಲುಪೇಟೆ: ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ಒಳಮೀಸಲಾತಿಯನ್ನು ಸಂಪೂರ್ಣವಾಗಿ ಜಾರಿಗೊಳಿಸಿ, ಮಾದಿಗ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿ, ದಲಿತ ಸಂಘರ್ಷ ಸಮಿತಿ ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ ಬಣದ ವತಿಯಿಂದ ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ಗೆ ಮನವಿ ಸಲ್ಲಿಸಲಾಯಿತು.

ಪ್ರವರ್ಗ 'ಎ' ಅಡಿಯಲ್ಲಿ ಮಾದಿಗ ಹಾಗೂ ಸಂಬಂಧಿತ ಜಾತಿಗಳಿಗೆ ಶೇ. 5.25ರಷ್ಟು ಒಳಮೀಸಲಾತಿ ನಿಗದಿಪಡಿಸಲಾಗಿದ್ದರೂ, ಮೂರುಕ್ಕಿಂತ ಕಡಿಮೆ ಹುದ್ದೆಗಳು ಲಭ್ಯವಿರುವ ಸಂದರ್ಭಗಳಲ್ಲಿ 'ಎಸ್‌ಸಿ ಸಾಮಾನ್ಯ' ಎಂದು ಪರಿಗಣಿಸುವುದರಿಂದ ಮಾದಿಗ ಸಮುದಾಯಕ್ಕೆ ಅನ್ಯಾಯವಾಗುತ್ತಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಆದ್ದರಿಂದ 'ಎಸ್‌ಸಿ ಸಾಮಾನ್ಯ' ವ್ಯವಸ್ಥೆಯನ್ನು ತೆಗೆದುಹಾಕಿ, ಶೇ. 5.25ರ ಒಳಮೀಸಲಾತಿ ವ್ಯಾಪ್ತಿಯಲ್ಲಿಯೇ ಹುದ್ದೆಗಳನ್ನು ಭರ್ತಿ ಮಾಡಬೇಕು. ಅಲ್ಲದೆ, ಬ್ಯಾಕ್‌ಲಾಗ್ ಹುದ್ದೆಗಳು, ಹೊರಗುತ್ತಿಗೆ ನೇಮಕಾತಿ ಹಾಗೂ ನೇರ ನೇಮಕಾತಿಗಳಲ್ಲಿಯೂ ಒಳಮೀಸಲಾತಿ ಅನ್ವಯಿಸಬೇಕು ಎಂದು ಒತ್ತಾಯಿಸಲಾಯಿತು.

ಇದೇ ವೇಳೆ, ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಗಳ ಅನುಷ್ಠಾನ ಹಾಗೂ ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿ ಸಮುದಾಯಕ್ಕೆ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸಿ, ಒಳಮೀಸಲಾತಿಯ ಆಧಾರದ ಮೇಲೆ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಸಚಿವರಿಗೆ ಮನವಿ ಮಾಡಲಾಯಿತು. ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿಯ ಗುಂಡ್ಲುಪೇಟೆ ತಾಲೂಕು ಸಂಚಾಲಕ ನಾಗಮಲ್ಲು ಭೀಮನಬೀಡು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬೆಂಗಳೂರು ಶಿಕ್ಷಕರ ಕ್ಷೇತ್ರ ಚುನಾವಣೆ - ಜಿಲ್ಲೆಯಲ್ಲಿ ಶೇ.96.66ರಷ್ಟು ಮತದಾನ

ಸ್ಥಾಪನೆಯಾಗಿದ್ದ ಎಲ್ಲಾ 9 ಮತಗಟ್ಟೆಗಳಲ್ಲಿ ಶಾಂತಿಯುತ ಮತದಾನ

ರಾಮನಗರ: ವಿಧಾನ ಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರಕ್ಕೆ ಶುಕ್ರವಾರ ನಡೆದ ಚುನಾವಣೆ ಜಿಲ್ಲೆಯಲ್ಲಿ ಶಾಂತಿಯುತ ಯುತವಾಗಿ ನೆರೆವೇರಿದ್ದು, ಶೇ. 96.66ರಷ್ಟು ಮತದಾನವಾಗಿದೆ. ಅ.27ರಂದು ಬೆಂಗಳೂರು ನಗರದಲ್ಲಿ ಮತ ಎಣಿಕೆ ನಡೆಯಲಿದೆ.

ಜಿಲ್ಲೆಯಲ್ಲಿ ಸ್ಥಾಪನೆಯಾಗಿದ್ದ 9 ಮತಗಟ್ಟೆಗಳಲ್ಲಿ ಬೆಳಗ್ಗೆ 8 ಗಂಟೆಗೆ ಆರಂಭವಾದ ಮತದಾನ ಪ್ರಕ್ರಿಯೆ ಸಂಜೆ 4ರ ತನಕ ನಡೆಯಿತು. ಬೆಳಗ್ಗಿನಿಂದಲೇ ಶಿಕ್ಷಕರು ಮತ ಕೇಂದ್ರಗಳಿಗೆ ಆಗಮಿಸಿ ಮತದಾನ ಮಾಡಿದರು.

3193 ಪೈಕಿ 3072 ಮತದಾರರ ಹಕ್ಕು ಚಲಾವಣೆ

ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ 1,688 ಪುರುಷ ಮತದಾರರು ಹಾಗೂ 1,505 ಮಹಿಳಾ ಮತದಾರರು ಸೇರಿ ಒಟ್ಟಾರೆ 3,193 ಮತದಾರರಿದ್ದಾರೆ. 1,633 ಪುರುಷ ಹಾಗೂ 1,439 ಮಹಿಳಾ ಮತದಾರರು ಸೇರಿದಂತೆ ಒಟ್ಟಾರೆ 3,072 ಮಂದಿ ತಮ್ಮ ಹಕ್ಕು ಚಲಾಯಿಸಿದ್ದಾರೆ. ಈ ಮೂಲಕ ಜಿಲ್ಲೆಯಲ್ಲಿ ಒಟ್ಟಾರೆ ಶೇ. 96.66 ಮತದಾನವಾಗಿದೆ.

ಯಾವ ತಾಲ್ಲೂಕಿನಲ್ಲಿ ಎಷ್ಟು ಮತದಾನ

ಮಾಗಡಿ ತಾಲ್ಲೂಕಿನಲ್ಲಿ 535 ಮತ ಚಲಾವಣೆ

ಮಾಗಡಿ ತಾಲ್ಲೂಕಿನಲ್ಲಿ ಭಾಗ ಸಂಖ್ಯೆ-47ರ ತಹಶೀಲ್ದಾರರ ಕಚೇರಿಯ ಕೋರ್ಟ್ ಆವರಣದಲ್ಲಿ ಸ್ಥಾಪನೆಯಾಗಿದ್ದ ಮತಗಟ್ಟೆಯಲ್ಲಿ 311 ಮತದಾರರ ಪೈಕಿ 295 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ.

ಭಾಗ ಸಂಖ್ಯೆ-48ರ ಕುದೂರು ಗ್ರಾಮ ಪಂಚಾಯತ್ ಕಚೇರಿಯಲ್ಲಿಯಲ್ಲಿ ಸ್ಥಾಪಿಸಲಾಗಿರುವ ಮತಗಟ್ಟೆಯಲ್ಲಿ 244 ಮತದಾರರ ಪೈಕಿ 240 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಮಾಗಡಿ ತಾಲ್ಲೂಕಿನಲ್ಲಿ 555 ಮತದಾರ ಪೈಕಿ, 535 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ.

ರಾಮನಗರ ತಾಲ್ಲೂಕಿನಲ್ಲಿ 833 ಮತಗಳ ಪೈಕಿ 794 ಮತಗಳ ಚಲಾವಣೆ

ರಾಮನಗರ ತಾಲ್ಲೂಕಿನಲ್ಲಿ ತಾಲೂಕು ಆಡಳಿತ ಸೌಧದಲ್ಲಿರುವ ತಹಶೀಲ್ದಾರ್ ಕಚೇರಿ ಆವರಣದಲ್ಲಿ ಎರಡು ಮತಕಟ್ಟೆಗಳು ಸ್ಥಾಪನೆಯಾಗಿದ್ದವು. ಕೊಠಡಿ ಸಂಖ್ಯೆ-01ರ, ಭಾಗ ಸಂಖ್ಯೆ-49ರಲ್ಲಿ 217 489 ಮತದಾರರ ಪೈಕಿ 466 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಕೊಠಡಿ ಸಂಖ್ಯೆ-02ರ, ಭಾಗ ಸಂಖ್ಯೆ-50ರಲ್ಲಿ 344 ಮತದಾರರ ಪೈಕಿ 328 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ರಾಮನಗರ ತಾಲ್ಲೂಕಿನಲ್ಲಿ 833 ಮತದಾರರಿದ್ದು, 794 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ.

ಚನ್ನಪಟ್ಟಣ ತಾಲ್ಲೂಕಿನಲ್ಲಿ 902 ಮತಗಳ ಚಲಾವಣೆ

ಚನ್ನಪಟ್ಟಣ ತಾಲ್ಲೂಕಿನ ಭಾಗ ಸಂಖ್ಯೆ-51ರ ತಾಲ್ಲೂಕು ಆಡಳಿತ ಸೌಧದ ತಹಶೀಲ್ದಾರ್ ಕಚೇರಿಯಲ್ಲಿ ಸ್ಥಾಪಿಸಲಾದ ಮತಗಟ್ಟೆಯಲ್ಲಿ 770 ಮತದಾರರ ಪೈಕಿ 749 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಭಾಗ ಸಂಖ್ಯೆ-52ರ ಕೋಡಂಬಳ್ಳಿಯ ನಾಡಕಚೇರಿಯಲ್ಲಿ ಸ್ಥಾಪಿಸಿದ್ದ ಮತಗಟ್ಟೆಯಲ್ಲಿ 156 ಮತದಾರರ ಪೈಕಿ 153 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಚನ್ನಪಟ್ಟಣ ತಾಲ್ಲೂಕಿನಲ್ಲಿ ಒಟ್ಟಾರೆ 926 ಮತದಾರರಿದ್ದು, 902 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ.

ಹಾರೋಹಳ್ಳಿಯಲ್ಲಿ 200ರ ಪೈಕಿ 199 ಮತಗಳು

ಹಾರೋಹಳ್ಳಿ ತಾಲ್ಲೂಕಿನ ಭಾಗ ಸಂಖ್ಯೆ-53ರ ಕೆಪಿಎಸ್ ಜಿಎಚ್‌ಪಿಎಸ್ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ಥಾಪಿಸಲಾದ ಮತಗಟ್ಟೆಯಲ್ಲಿ 200 ಮತದಾರರ ಪೈಕಿ 199 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದು,

ಕನಕಪುರದಲ್ಲಿ 642 ಮತದಾರರಿಂದ ಹಕ್ಕು ಚಲಾವಣೆ

ಕನಕಪುರ ತಾಲ್ಲೂಕಿನಲ್ಲಿ ತಾಲೂಕು ಆಡಳಿತ ಸೌಧದಲ್ಲಿರುವ ತಹಶೀಲ್ದಾರ್ ಕಚೇರಿ ಆವರಣದಲ್ಲಿ 2 ಮತಗಟ್ಟೆಗಳು ಸ್ಥಾಪನೆಯಾಗಿದ್ದವು. ಕೊಠಡಿ ಸಂಖ್ಯೆ-101ರ, ಭಾಗ ಸಂಖ್ಯೆ-54ರಲ್ಲಿ 339 ಮತದಾರರ ಪೈಕಿ 331 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಕೊಠಡಿ ಸಂಖ್ಯೆ-102ರ, ಭಾಗ ಸಂಖ್ಯೆ-55ರಲ್ಲಿ 340 ಮತದಾರರ ಪೈಕಿ 311 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಕನಕಪುರ ತಾಲ್ಲೂಕಿನಲ್ಲಿ 679 ಮತದಾರರಿದ್ದು, 642 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ. ಈ ಮೂಲಕ ಜಿಲ್ಲೆಯಲ್ಲಿ ಒಟ್ಟಾರೆ ಶೇ. 96.66 ಮತದಾನವಾಗಿದೆ ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಆರ್.ಚಂದ್ರಯ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿರುಸಿನಿಂದಲೇ ನಡೆದ ಮತದಾನ

ಬೆಳಗ್ಗೆ 8 ರಿಂದ 10ಗಂಟೆವರೆಗೆ ಒಟ್ಟು 600ಕ್ಕೂ ಹೆಚ್ಚು ಮಂದಿ ಮತದಾನ ಮಾಡಿದ್ದರು. ಮಧ್ಯಾಹ್ನ 2 ಗಂಟೆ ವೇಳೆಗೆ ಶೇಕಡ 77.48ರಷ್ಟು ಮತದಾನ ನಡೆಯಿತು. ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಯಶವಂತ್ ವಿ.ಗುರುಕರ್ ಭೇಟಿ ನೀಡಿ ವೀಕ್ಷಿಸಿದರು.

ಮತಯಾಚನೆ

ಬೆಂಗಳೂರು ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಅಭ್ಯರ್ಥಿಗಳ ಪೈಕಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಪುಟ್ಟಣ್ಣ, ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ರಂಗನಾಥ್ ಅವರ ನಡುವೆ ಜಿದ್ದಾ-ಜಿದ್ದಿನ ಚುನಾವಣೆ ನಡೆದಿದೆ ಎನ್ನಲಾಗಿದೆ.

ಮತಗಟ್ಟೆಗಳ ಬಳಿ ಕಾಂಗ್ರೆಸ್, ಜೆಡಿಎಸ್-ಬಿಜೆಪಿ ಕಾರ್ಯಕರ್ತರು ಮತಯಾಚನೆ ಮಾಡಿದರು. ರಾಮನಗರದ ಮಿನಿ ವಿಧಾನಸೌಧದ ಸಮೀಪ ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ ಪರ ಪಕ್ಷದ ಜಿಲ್ಲಾಧ್ಯಕ್ಷ ಸಿಎನ್ ಆರ್ ವೆಂಕಟೇಶ್, ಗ್ಯಾರೆಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಜಿಲ್ಲಾಧ್ಯಕ್ಷ ಕೆ.ರಾಜು, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎ.ಬಿ.ಚೇತನ್ ಕುಮಾರ್ ಸೇರಿದಂತೆ ಹಲವು ಮತಯಾಚನೆ ಮಾಡಿದರು. ಇನ್ನು ಮೈತ್ರಿ ಅಭ್ಯರ್ಥಿ ಎ.ಸಿ.ರಂಗನಾಥ್ ಪರ ಜೆಡಿಎಸ್ ಕೋರ್ ಕಮಿಟಿ ಸದಸ್ಯರಾದ ಮಾಜಿ ಶಾಸಕ ಎ.ಮಂಜುನಾಥ್,

ಮುಖಂಡರಾದ ಸಬ್ಬಕೆರೆ ಶಿವಲಿಂಗಯ್ಯ, ದೊರೆಸ್ವಾಮಿ, ಸುಗ್ಗನಹಳ್ಳಿ ರಾಮಕೃಷ್ಣ, ಮಂಜುನಾಥ್, ಜಿ.ಟಿ.ಕೃಷ್ಣ, ರಾಜಶೇಖರ್, ಜಯಕುಮಾರ್, ಭರತ್ ಕೆಂಪಣ್ಣ, ಬಿಜೆಪಿ ಮುಖಂಡರಾದ ಸುರೇಶ್, ರುದ್ರದೇವರು, ಎಸ್.ಆರ್.ನಾಗರಾಜು ಸೇರಿದಂತೆ ಮುಖಂಡರು ಮತಯಾಚನೆ ಮಾಡಿದರು. ಇದೇ ಮಾದರಿಯಲ್ಲಿ ಜಿಲ್ಲೆಯ ವಿವಿಧೆಡೆ ಸ್ಥಾಪನೆ ಮಾಡಲಾಗಿರುವ ಮತಗಟ್ಟೆಗಳ ಬಳಿ ಕಾರ್ಯಕರ್ತರು ಹಾಗೂ ಮುಖಂಡರು ಮತಯಾಚನೆ ಮಾಡಿದರು.

ಖಾಸಗಿ ಶಾಲೆಗಳ ಒಕ್ಕೂಟದಿಂದ ಮತಯಾಚನೆ

ಜಿಲ್ಲೆಯ ಖಾಸಗಿ ಶಾಲೆಗಳ ಒಕ್ಕೂಟದ ಬಹುತೇಕ ಸದಸ್ಯರು ಪುಟ್ಟಣ್ಣ ಪರ ಮತಯಾಚಿಸಿದ್ದು ಕಂಡು ಬಂತು. ಇತ್ತೀಚೆಗಷ್ಟೆ ರಚನೆಯಾಗಿರುವ ಜಿಲ್ಲಾ ಮೈನಾರಿಟಿ ಶಾಲೆಗಳ ಸಂಘದ ಪದಾಧಿಕಾರಿಗಳ ಪೈಕಿ ಕೆಲವರು ಸಹ ಪುಟ್ಟಣ್ಣ ಪರ ಮತಯಾಚನೆ ನಡೆಸಿದ್ದು ಕಂಡು ಬಂತು.

ಸಮಾಜಕ್ಕೆ ಕೊಡುಗೆ ನೀಡಿ

ಶಾಸಕ ಟಿ.ಎಸ್. ಶ್ರೀವತ್ಸ ಅಭಿಮತ । ವಿದ್ಯೆ ಕಲಿಸಿದ ಶಾಲೆ, ಸಮಾಜವನ್ನು ಮರೆಯಬೇಡಿ; ತಂದೆ-ತಾಯಿಗೆ ಗೌರವ ನೀಡಿ: ಕಿವಿಮಾತು

ಮೈಸೂರು: ವಿದ್ಯಾವಂತರಾದ ಬಳಿಕ ತಾವು ಓದಿದ ಶಾಲೆ ಹಾಗೂ ಸಮಾಜಕ್ಕೆ ಏನಾದರೂ ಕೊಡುಗೆ ನೀಡುವ ಗುಣವನ್ನು ಬೆಳೆಸಿಕೊಳ್ಳಬೇಕು ಎಂದು ಶಾಸಕ ಟಿ.ಎಸ್. ಶ್ರೀವತ್ಸ ಹೇಳಿದರು.

ನಗರದ ಸಿದ್ಧಾರ್ಥನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಶುಕ್ರವಾರ ನಡೆದ ಸಾಂಸ್ಕೃತಿಕ ಹಾಗೂ ವಿವಿಧ ವೇದಿಕೆಗಳ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾವಂತರಾದ ಬಳಿಕ ತಂದೆ-ತಾಯಿಯನ್ನು ಮರೆಯಬಾರದು. ಅವರನ್ನು ಅನಾಥಾಶ್ರಮಕ್ಕಾಗಲಿ, ವೃದ್ಧಾಶ್ರಮಕ್ಕಾಗಲಿ ಸೇರಿಸಬಾರದು ಎಂದು ಕಿವಿಮಾತು ಹೇಳಿದರು.

ಸಂಪಾದಿಸಿದ ಸಂಪತ್ತಿನಲ್ಲಿ ಸಮಾಜಕ್ಕೂ ಪಾಲಿರಲಿ

ಬಡ ಕುಟುಂಬದಿಂದ ಬಂದ ವ್ಯಕ್ತಿಯೊಬ್ಬರು ಸರ್ಕಾರಿ ಹುದ್ದೆ ಪಡೆದು ಅಪಾರ ಹಣ ಹಾಗೂ ಚಿನ್ನಾಭರಣ ಗಳಿಸಿದ್ದರು. ಲೋಕಾಯುಕ್ತ ದಾಳಿ ನಡೆಸಿದ ಸಂದರ್ಭದಲ್ಲಿ ಅವರ ಬಳಿ ?8 ಕೋಟಿ ಹಣ ಮತ್ತು 3 ಕೆ.ಜಿ. ಚಿನ್ನವನ್ನು ವಶಪಡಿಸಿಕೊಳ್ಳಲಾಗಿತ್ತು. ಆದರೆ, ಅವರು ಗಳಿಸಿದ ಸಂಪತ್ತನ್ನು ಬಡವರಿಗೆ ನೀಡಲಿಲ್ಲ. ಹೀಗಾಗಿ, ನಾವು ಎಷ್ಟೇ ಸಂಪಾದಿಸಿದರೂ ನಮ್ಮ ಮೂಲವನ್ನು ಮರೆಯಬಾರದು ಎಂದು ತಿಳಿಸಿದರು.

ಮೈಸೂರಿನ ನಂಜುಮಳಿಗೆಯಲ್ಲಿರುವ ಸರ್ಕಾರಿ ಕಾಲೇಜಿನಲ್ಲಿ 60 ವರ್ಷಗಳ ಹಿಂದೆ ವ್ಯಾಸಂಗ ಮಾಡಿದ ವ್ಯಕ್ತಿಯೊಬ್ಬರು ಇಂದು ಅಮೆರಿಕದಲ್ಲಿ ವೈದ್ಯರಾಗಿದ್ದಾರೆ. ತಮಗೆ ವಿದ್ಯಾದಾನ ಮಾಡಿದ ಕಾಲೇಜಿಗೆ ?1.80 ಕೋಟಿ ಹಣ ನೀಡಿ, ಕಾಲೇಜನ್ನು ನವೀಕರಿಸುವುದರ ಜತೆಗೆ ಸ್ಮಾರ್ಟ್ ಕ್ಲಾಸ್ ವ್ಯವಸ್ಥೆಯನ್ನೂ ಕಲ್ಪಿಸಿದ್ದಾರೆ ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಟೆರೆಷಿಯನ್ ಕಾಲೇಜಿನ ದೈಹಿಕ ಶಿಕ್ಷಣ ಮತ್ತು ಕ್ರೀಡಾ ನಿರ್ದೇಶಕ ಆಂಥೋನಿ ಮೋಸೆಸ್, ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎನ್. ಮಾಯಾದೇವಿ, ಸಾಂಸ್ಕೃತಿಕ ವೇದಿಕೆಯ ಕಾರ್ಯದರ್ಶಿ ಎನ್. ಗುರುಪಾದಸ್ವಾಮಿ, ಖಜಾಂಚಿ ಡಾ. ಕುಮಾರ್ ಬೆಳಲೆ ಸೇರಿದಂತೆ ಇತರರು ಹಾಜರಿದ್ದರು.

ಮಕ್ಕಳಿಗೆ ಮಾರ್ಗದರ್ಶಕರಾಗಿ

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯ ಡಾ. ಮೈಸೂರು ಗುರುರಾಜ್ ಮಾತನಾಡಿ, ಮಕ್ಕಳು ಎಷ್ಟೇ ಓದಿ ಬೆಳೆದರೂ ತಂದೆ-ತಾಯಿಗೆ ಗೌರವ ನೀಡಬೇಕು. ತಮಗೆ ಸಿಗದ ಅವಕಾಶಗಳು ತಮ್ಮ ಮಕ್ಕಳಿಗಾದರೂ ಸಿಗಲಿ ಎಂಬ ಉದ್ದೇಶದಿಂದ ಪೋಷಕರು ಶಿಕ್ಷಣ ಕೊಡಿಸಿ, ಸಮಾಜದಲ್ಲಿ ಗೌರವಯುತವಾಗಿ ಬದುಕಲು ಅವಕಾಶ ಮಾಡಿಕೊಡುತ್ತಾರೆ. ಹೀಗಾಗಿ, ವಿದ್ಯಾವಂತರಾದ ಬಳಿಕ ಎಲ್ಲರೂ ಇತರರಿಗೆ ಮಾರ್ಗದರ್ಶಕರಾಗಿ ಬದುಕಬೇಕು ಎಂದು ಕಿವಿಮಾತು ಹೇಳಿದರು. ಇದೇ ಸಂದರ್ಭದಲ್ಲಿ ಮೈಸೂರು ಗುರುರಾಜ್ ಅವರು ವೇದಿಕೆಯಲ್ಲಿ ಮಲೆ ಮಹದೇಶ್ವರ, ಮಂಟೇಸ್ವಾಮಿ ಹಾಗೂ ಸಿದ್ದಪಾಜಿ ಗೀತೆಗಳನ್ನು ಹಾಡಿ ಸಮಾರಂಭದಲ್ಲಿ ನೆರೆದಿದ್ದವರನ್ನು ರಂಜಿಸಿದರು.

ಮೊದಲ ಪುಟದಿಂದ

ಸಿಎಂ ಪತ್ನಿ ಪುಷ್ಪಾರ್ಚನೆ ತಪ್ಪೇನಿಲ್ಲ:

ನಡೆಯುತ್ತಿದೆ. ತನಿಖಾ ತಂಡದ ಮುಂದೆ ಅಧಿಕಾರಿ ಉತ್ತರ ಕೊಡುತ್ತಾರೆ. ಮೂವರು ಕೂಡ ದಲಿತ ಸಚಿವರು. ಸಚಿವರಾದ ಬಾಲಕೃಷ್ಣ, ಪುಟ್ಟರಂಗಶೆಟ್ಟಿ ಅವರನ್ನೂ ತಡೆದಿದ್ದರು. ನಾನೇ ಸಿಎಂಗೆ ಹೇಳಿ ಬಿಡಿಸಿದ್ದೇನೆ ಎಂದು ಯತೀಂದ್ರ ತಿಳಿಸಿದರು..

ವರ್ಚಸ್ಸು ಹಾಳು ಮಾಡಲು ಸಂಚು

ಈಗ ಮನೆಯಲ್ಲಿ ಕೂರಿಸಲಾಗಿದೆ. ಸಿದ್ದರಾಮಯ್ಯ ಅವರ ಶಕ್ತಿ ವಿರುದ್ಧ ನಮ್ಮ ಹೋರಾಟ ಇತ್ತು. ಅಂತಹ ವ್ಯಕ್ತಿಯ ವರ್ಚಸ್ಸನ್ನು ನಾವು ಹಾಳು ಮಾಡಿಲ್ಲ ಎಂದು ಹೇಳಿದರು.

ಸ್ಟಿಂಗ್ ಆಪರೇಷನ್‌ನಲ್ಲಿ ಕಾಣಿಸಿಕೊಂಡಿರುವ ಕೃಪಾ ಆಳ್ವಾ ಕಾಂಗ್ರೆಸ್ ನವರು. ಇದ

ನಾಳೆ ಭಗೀರಥ ಚಾರಿಟಬಲ್ ಟ್ರಸ್ಟ್ ಚಿಂತನ-ಮಂಥನ ಸಭೆ

ಚಾಮರಾಜನಗರ: ಭಗೀರಥ ಶೈಕ್ಷಣಿಕ ಮತ್ತುಚಾರಿಟಬಲ್ ಟ್ರಸ್ಟ್ ವತಿಯಿಂದ ಅ. 25ರಂದು ನಗರದಲ್ಲಿ ಚಿಂತನ-ಮಂಥನ ಸಭೆ' ಅಯೋಜಿಸಲಾಗಿದೆ ಎಂದು ಟ್ರಸ್ಟಿ ಡಿ.ಜಗನ್ನಾಥಸಾಗರ್ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಅಂದು ಭಾನುವಾರ ನಗರದ ಎಲ್‌ಐಸಿ ಕಚೇರಿ ಹಿಂಭಾಗದಲ್ಲಿರುವ ಹೋಟಲ್ ನಂದಿ ಇನ್ ಸಭಾಂಗಣದಲ್ಲಿ ನಡೆಯುವ ಚಿಂತನ-ಮಂಥನ ಸಭೆಯ ದಿವ್ಯಸಾನಿಧ್ಯವನ್ನು ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಆಯ್ಯನ ಸರಗೂರುಮಠದ ಶ್ರೀ ಮಹಾದೇವಸ್ವಾಮಿಗಳು, ಮಂಗಲ ಗ್ರಾಮದ 88ಗಡಿಕಟ್ಟೆ ಗ್ರಾಮಾಂತರ ಆಚಾರ ವಿಚಾರಣೆ ಅಧಿಪತಿ ಶ್ರೀ ಮಂಜುನಾಥಸ್ವಾಮೀಜಿ ವಹಿಸುವವರು. ಪಶುಸಂಗೋಪನಾ ಮತ್ತು ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಿ.ಪುಟ್ಟರಂಗಶೆಟ್ಟರು ಸಭೆ ಉದ್ಘಾಟಿಸುವವರು. ಶ್ರೀಭಗೀರಥ ಶೈಕ್ಷಣಿಕ ಮತ್ತು ಚಾರಿಟಬಲ್ ಟ್ರಸ್ಟ್ ಮ್ಯಾನೇಜಿಂಗ್ ಟ್ರಸ್ಟಿ ಪಿ.ಶಿವಶಂಕರ್ ಅಧ್ಯಕ್ಷತೆ ವಹಿಸುವವರು. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ ವಿಶ್ರಾಂತ ಕುಲಪತಿ ಡಾ.ಕೆ.ಎಸ್.ರವೀಂದ್ರ, ಟ್ರಸ್ಟಿನ ಪ್ರಧಾನ ಮಹಾಪೋಷಕರಾದ ವೆಂಕಟೇಶ್ ಹೆಚ್.ಬಂಡಿ, ಎಂ.ಎಸ್.ಲೋಕೇಶ್, ಹೆಚ್.ಎನ್.ವಿಜಯಕುಮಾರ್, ಮಹಾ ಪೋಷಕ ಹೆಚ್.ಆರ್.ಕೃಷ್ಣಪ್ಪ ಭಾಗವಹಿಸಲಿದ್ದಾರೆ ಎಂದರು.

ಉಪ್ಪಾರ ಸಮಾಜದ ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ "ಆರ್ಥಿಕ ನೆರವು" ನೀಡಿ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸುವುದು, ವಿದ್ಯಾರ್ಥಿನಿಲಯ, ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವುದು, ಹೆಣ್ಣು ಮಕ್ಕಳ ವಿದ್ಯಾರ್ಥಿನಿಲಯಕ್ಕೆ ಮೊದಲನೇ ಆದ್ಯತೆ ನೀಡುವುದು, ಪ್ರತಿಭಾವಂತ ಬಡ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಶೈಕ್ಷಣಿಕ ದತ್ತು ಯೋಜನೆಹಮ್ಮಿಕೊಳ್ಳುವುದು.ರಾಜ್ಯ,ರಾಷ್ಟ್ರ,ಅಂತರಾಷ್ಟ್ರೀಯ ಮಟ್ಟದ ಸಂಸ್ಥೆಗಳಲ್ಲಿ ಶಿಕ್ಷಣ,ತರಬೇತಿ ಪಡೆಯಲು ಮಾರ್ಗದರ್ಶನ ನೀಡುವುದು. ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ನೀಡುವುದು.ವಿಶೇಷ ಚೇತನ ಮಕ್ಕಳಿಗೆ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾದ ಸೌಲಭ್ಯ ಮತ್ತು ಆದ್ಯತೆಯ ಮೇಲೆ ನೆರವು ನೀಡುವುದು. ಉಪ್ಪಾರ ಸಮಾಜದಲ್ಲಿ ಇನ್ನೂ ಆಳವಾಗಿ ಬೇರೂರಿರುವ ಅಂಧ ಶ್ರದ್ಧೆ ಮತ್ತು ಮೌಢ್ಯಗಳ ನಿರ್ಮೂಲನೆಗಾಗಿ ಶ್ರಮಿಸುವುದು. ಶೈಕ್ಷಣಿಕ ಅಭಿವೃದ್ಧಿಗಾಗಿ ಗಣನೀಯ ಸೇವೆ ಸಲ್ಲಿಸಿದ ಗಣ್ಯರಿಗೆ/ವಿವಿಧ ಕ್ಷೇತ್ರಗಳ ಉಪ್ಪಾರ ಜನಾಂಗದ ಸಾಧಕರನ್ನು ಸನ್ಮಾನಿಸುವ ಮೂಲಕ ವಿದ್ಯಾರ್ಥಿಗಳು ಸಾಧಕರನ್ನು ಅನುಕರಣೆ ಮಾಡಲು ಉತ್ತೇಜಿ ಸುವುದು ಭಗೀರಥ ಶೈಕ್ಷಣಿಕ ಮತ್ತು ಚಾರಿಟಬಲ್ ಟ್ರಸ್ಟ್ ಉದ್ದೇಶ ವಾಗಿದೆ ಎಂದರು. ಈಗಾಗಲೇ ಟ್ರಸ್ಟ್ ವತಿಯಿಂದ 380 ಕ್ಕೂ ಪ್ರತಿಭಾವಂತ ಮಕ್ಕಳಿಗೆ ಆರ್ಥಿಕ ನೆರವು ನೀಡಿದ್ದು, ಅದರಲ್ಲಿ ಚಾಮರಾಜನಗರ ಜಿಲ್ಲೆಯಲ್ಲಿ 89 ಪ್ರತಿಭಾವಂತ ಬಡ ಮಕ್ಕಳಿಗೆ 14 ಲಕ್ಷ ರೂ.ಆರ್ಥಿಕ ನೆರವು ನೀಡಲಾಗಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಟ್ರಸ್ಟಿ , ಜೆ.ಪಂ.ಮಾಜಿ ಅಧ್ಯಯನ ಸಿ.ಎ.ಮಹದೇವಶೆಟ್ಟಿ,ಟ್ರಸ್ಟಿ ನರಸಿಂಹಮೂರ್ತಿ, ಟ್ರಸ್ಟಿನ ದಾನಿಗಳಾದ ಬಿ.ಸ್ವಾಮಿ, ಸಿ.ರಾಜ, ಟ್ರಸ್ಟಿನ ವಲಯ ಕಾರ್ಯದರ್ಶಿ ಸೋಮಶೇಖರಪ್ಪ ಹಾಜರಿದ್ದರು.

ಹಿತರಕ್ಷಣಾ ಸಮಿತಿ ಕರೆವಂತೆ ಮನವಿ



ಚಾಮರಾಜನಗರ: ತಾಲೂಕು ಮತ್ತು ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಿತರಕ್ಷಣಾ ಸಮಿತಿಯ ಸಭೆಯನ್ನು ಕರೆಯುವಂತೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಡಿ.ಜಿ.ಸಾಗರ ಬಣದ ವತಿಯಿಂದ ಜಿಲ್ಲಾಧಿಕಾರಿ ಶ್ರೀರೂಪ ಅವರಿಗೆ ಮನವಿ ಸಲ್ಲಿಸಲಾಯಿತು.

ತಾಲೂಕು ಆಡಳಿತ, ತಾಲೂಕು ಸಮಾಜ ಕಲ್ಯಾಣ ಇಲಾಖೆಗೆ ಅನೇಕ ಬಾರಿ ದಲಿತ ಸಂಘಟನೆಗಳು ಮನವಿ ಮಾಡಿದರು.ಕಳೆದ 10 ತಿಂಗಳಿಂದಲ್ಲೂ ತಾಲೂಕು ಮತ್ತು ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಿತರಕ್ಷಣಾ ಸಮಿತಿಯ ಸಭೆ ನಡೆಸಿಲ್ಲ. ವಿಳಂಬ ನೀತಿ ಧೋರಣೆ ಅನುಸರಿಸುತ್ತಿರುವುದು ಅತ್ಯಂತ ಖಂಡನೀಯವಾಗಿದೆ.ಆದ್ದುದ್ದರಿಂದ ತಕ್ಷಣವೇ ತಾಲೂಕು ಮತ್ತು ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಿತರಕ್ಷಣಾ ಸಮಿತಿಯ ಸಭೆಯನ್ನು ಕರೆಯಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಸಮಿತಿಯ ಜಿಲ್ಲಾ ಸಂಚಾಲಕ ಸಿ.ಎಂ.ಶಿವಣ್ಣ ಒತ್ತಾಯಿ ಸಿದರು. ಸಂಘಟನಾ ಸಂಚಾಲಕ ರಂಗಸ್ವಾಮಿ, ಕೃಷ್ಣಯ್ಯ, ಪ್ರದೀಪ್, ಚಂದ್ರಶೇಖರ್, ರವಿಕುಮಾರ್ ಹಾಜರಿದ್ದರು.

ಸಿಮ್ಸ್ ಆಸ್ಪತ್ರೆಯಲ್ಲಿ ಅಪರೂಪದ ಕರುಳಿನ ಬ್ಯಾಂಡ್ ಶಸ್ತ್ರಚಿಕಿತ್ಸೆ ಯಶಸ್ವಿ



ಚಾಮರಾಜನಗರ : ತೀವ್ರ ಹೊಟ್ಟೆನೋವಿನಿಂದ ಬಳಲುತ್ತಿದ್ದ 14 ವರ್ಷದ ಬಾಲಕನಿಗೆ ನಗರದ ಹೊರವಲಯದಲ್ಲಿರುವ ಯಡಪುರ ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆ ವಿಭಾಗದ ವೈದ್ಯರ ತಂಡವು ಯಶಸ್ವಿಯಾಗಿ ಸಂಕೋಚನದ ಕರುಳಿನ ಬ್ಯಾಂಡ್ ಶಸ್ತ್ರಚಿಕಿತ್ಸೆ ನಡೆಸಿ, ಜೀವ ಉಳಿಸಿದ್ದಾರೆ.

ಗುಂಡ್ಲುಪೇಟೆ ತಾಲೂಕಿನ 14ನೇ ವರ್ಷದ ಬಾಲಕನಿಗೆ ತೀವ್ರ ಹೊಟ್ಟೆನೋವು. ಕಾಣಿಸಿಕೊಂಡು ಸಿಮ್ಸ್ ಆಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದರು. ಹೊಟ್ಟೆನೋವು ಶಮನವಾಗದ ಹಿನ್ನಲೆಯಲ್ಲಿ ವೈದ್ಯರು ಸಿಟಿ ಸ್ಕ್ಯಾನಿಂಗ್ ಮಾಡಿಸಿದರು. ಕರುಳಿನ ಬ್ಯಾಂಡ್ ಸಮಸ್ಯೆ ಕಾಣಿಸಿಕೊಂಡು ಆ ಭಾಗ ರಕ್ತ ಸಂಚಲನ ಇಲ್ಲದೆ ಕರುಳು ಹಾನಿಯಾಗಿದ್ದು, ಜೀವ ಉಳಿಯುವುದು ಕಷ್ಟಕರವಾಯಿತು. ಅದನ್ನು ಅರಿತ ಶಸ್ತ್ರಚಿಕಿತ್ಸಕ ವಿಭಾಗದ ಮುಖ್ಯಸ್ಥರಾದ ಡಾ. ಟಿ.ಕಿರಣ್, ಸಹಾಯಕ ಪ್ರಾಧ್ಯಾಪಕ ಕಿರಣ್ ನಾಯಕ್, ಅರವಳಿಕೆ ತಜ್ಞರಾದ ಡಾ.ಮಾನಸ ತಂಡ ಸೆ. 22 ರಂದು ಬಾಲಕನಿಗೆ ಶಸ್ತ್ರಚಿಕಿತ್ಸೆ ಮೂಲಕ ಹಾನಿಯಾಗಿದ್ದ ಕರುಳಿನ ಬ್ಯಾಂಡ್ ಹೊರತೆಗೆಯುವಲ್ಲಿ ಯಶಸ್ವಿಯಾ ದರು. ಬಾಲಕ ಆರೋಗ್ಯ ಚೆನ್ನಾಗಿದ್ದು, ಆಸ್ಪತ್ರೆಯಿಂದ ಮನೆಗೆ ಕಳುಹಿಸಿಕೊಟ್ಟಿದ್ದಾರೆ.

ಇದೊಂದು ಅಪರೂಪ ಪ್ರಕರಣ

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಚಿನ್ನಭೋವಿ ಮಾತನಾಡಿ, ಗುಂಡ್ಲುಪೇಟೆ ತಾಲೂಕಿನ 14ನೇ ವರ್ಷದ ಬಾಲಕ ಪ್ರವೀಣ್ ಕುಮಾರ್ ಹೊಟ್ಟೆನೋವು ಎಂದು ದಾಖಲಾದರು. ಚಿಕಿತ್ಸೆ ನೀಡಿ, ತಪಾಸಣೆ ಮಾಡಿದಾಗ ಕರುಳಿನ ಸಮಸ್ಯೆ ಕಂಡು ಬಂತು. ಇಂತಹ ಪ್ರಕರಣಗಳು ಅಪರೂಪದಲ್ಲಿ ಅಪರೂಪವಾದದ್ದು, ಶಸ್ತ್ರಚಿಕಿತ್ಸಕ ವಿಭಾಗದ... ಮುಖ್ಯಸ್ಥರು ಯಶಸ್ವಿ ಶಸ್ತ್ರಚಿಕಿತ್ಸಕ ಹಾನಿಯಾಗಿದ್ದ ಕರುಳಿನ ಬ್ಯಾಂಡ್ ಭಾಗವನ್ನು ಹೊರತೆಗೆದಿದ್ದಾರೆ. ರೋಗಿಯು ಚೆನ್ನಾಗಿದ್ದು ಆಸ್ಪತ್ರೆಯಿಂದ ಮನೆಗೆ ಕಳುಹಿಸಿಕೊಡಲಾಗಿದೆ. ಶಸ್ತ್ರಿ ಚಿಕಿತ್ಸ ಮಾಡಿದ ವೈದ್ಯರ ತಂಡಕ್ಕೆ ಆಸ್ಪತ್ರೆ ವತಿಯಿಂದ ಅಭಿನಂದನೆ ಸಲ್ಲಿಸಿದರು.

ಶಸ್ತ್ರಚಿಕಿತ್ಸಕ ವಿಭಾಗದ ಮುಖ್ಯಸ್ಥರಾದ ಡಾ. ಟಿ.ಕಿರಣ್ ಮಾತನಾಡಿ, 14 ವರ್ಷದ ಬಾಲಕ ಹೊಟ್ಟೆನೋವು ಎಂದು ಆಸ್ಪತ್ರೆಯಲ್ಲಿ ದಾಖಲಾಗಿದ್ದರು. ನಾವು ತಪಾಸಣೆ ಮಾಡಿದಾಗ ಕರುಳಿನ ಸಮಸ್ಯೆ ಕಂಡು ಬಂತು. ಹೊಟ್ಟೆನೋವು ಶಮನವಾಗದ ಹಿನ್ನಲೆಯಲ್ಲಿ ಹೊಟ್ಟೆ ಅಪರೇಷನ್ ಮಾಡಿದಾಗ ಕರುಣಿನ ಬ್ಯಾಂಡ್ ಕಂಡು ಬಂತು ಇಂತಹ ಪ್ರಕರಣ 14 ನೇ ವರ್ಷದಲ್ಲಿ ಅಪರೂಪವಾದದ್ದು, ಕರಳು ಕೊಳೆತು ಹೋಗಿತು. ನಾವು ಮತ್ತು ನಮ್ಮ ತಂಡದವರು ಸರಿಯಾದ ಸಮಯಕ್ಕೆ ಶಸ್ತ್ರಚಿಕಿತ್ಸೆ ಮಾಡಿ ಕರುಣಿನ ಬ್ಯಾಂಡ್ ಹೊರತೆಗೆದು ಸರಿಮಾಡಿದ್ದೇವು, ಆ ಹುಡುಗ ಆರೋಗ್ಯವಾಗಿದ್ದು ಆಸ್ಪತ್ರೆಯಿಂದ ಡಿಸ್ ಚಾರ್ಜ್ ಮಾಡಿದ್ದೇವೆ. ಇದೊಂದು ಅಪರೂಪದ ಪ್ರಕರಣವಾಗಿದೆ. ಸಮಯಕ್ಕೆ ಸರಿಯಾಗಿ ಶಸ್ತ್ರಚಿಕಿತ್ಸೆ ಮಾಡಿದ್ದರಿಂದ ಬಾಲಕ ಜೀವ ಉಳಿದಿದೆ. ಇದು ತುಂಬಾ ಖುಷಿಯಾಗಿದೆ ಎಂದರು.

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ

ಕಾರ್ಯಪಾಲಕ ಅಭಿಯಂತರವರ ಕಛೇರಿ, ಕನನೀಸ ಮತ್ತು ಒಚ ಮಂಡಳಿ, ವಿಭಾಗ ಜಲಭವನ, 1ನೇ ಮಹಡಿ, ಪಿ-4, 10ನೇ ಮುಖ್ಯ ರಸ್ತೆ, 3ನೇ ಅಡ್ಡ ರಸ್ತೆ, ಸರಸ್ವತಿ ಪುರಂ, ಮೈಸೂರು-09.
ಮೊ: 0821-2543552, ಇ-ಮೇಲ್: kwbmysdiv@gmail.com

ಟೆಂಡರ್ ಅಧಿಸೂಚನೆ

ಕಾಮಗಾರಿಯ ವಿವರ: ಕುಶಾಲನಗರ ಪಟ್ಟಣದ 2026-27 ನೇ ಸಾಲಿನ ಕುಡಿಯುವ ನೀರು ಸರಬರಾಜು ಯೋಜನೆಯ ವಾರ್ಷಿಕ ನಿರ್ವಹಣೆಯಡಿ ನವೆಂಬರ್-2026 ರಿಂದ ಮಾರ್ಚ್-2027 ರವರೆಗೆ 5 ತಿಂಗಳ ಅವಧಿಗೆ ನಿರ್ವಹಣೆ ಮಾಡುವ ಕಾಮಗಾರಿಯ ಟೆಂಡರ್ ಅನ್ನು ರೂ.33,99,474/- (ಜಿ.ಎಸ್.ಟಿ ಹೊರತುಪಡಿಸಿ) ಗಳಿಗೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ ಇಂಡೆಂಟ್ ಸಂಖ್ಯೆ : KUWSDB/2026-27/OW/WORK_INDENT556 ರಲ್ಲಿ ಆಹ್ವಾನಿಸಲಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಕರ್ನಾಟಕ ಸಾರ್ವಜನಿಕ ಪ್ರೂಕ್ಯೂರ್‌ಮೆಂಟ್ ಪೋರ್ಟಲ್ ವೆಬ್ ಸೈಟ್ https://kppp.karnataka.gov.in ಸಂಪರ್ಕಿಸುವುದು.

ಸಹಿ/- ಕಾರ್ಯಪಾಲಕ ಅಭಿಯಂತರರು, ಕ.ನ.ನೀ.ಸ ಮತ್ತು ಒ.ಚ ಮಂಡಳಿ, ವಿಭಾಗ ಮೈಸೂರು.

ವಾಸಾಸಂಇ/ಮೈಸೂರು/ಎಸ್‌ಎಸ್‌ಪಿ/872/2026-27

25ರಂದು ಜನಸ್ನೇಹಿ ಪೊಲೀಸ್ ಬಿರುದು

ಅ.25ರಂದು ಕನ್ನಡ ಪರ, ದಲಿತ ಪರ, ರೈತ ಪರ ಸಂಘಟನೆಗಳಿಂದ ಕಾರ್ಯಕ್ರಮ

ರಾಮನಗರ: ಪೊಲೀಸ್ ಇಲಾಖೆಯಲ್ಲಿ ದಕ್ಷತೆ, ಪ್ರಾಮಾಣಿಕತೆಯಿಂದ ಕರ್ತವ್ಯ ನಿರ್ವಹಿಸುತ್ತಿರುವ, ಮುಖ್ಯಮಂತ್ರಿಗಳ ಪದಕಕ್ಕೆ ಭಾಜನರಾಗಿರುವ ಪೊಲೀಸ್ ರುದ್ರೇಶ್ ಅಂತಲೇ ಸಾರ್ವಜನಿಕ ವಲಯದಲ್ಲಿ ಗುರುತಿಸಿಕೊಂಡಿರುವ ರುದ್ರೇಶ್ ಅವರಿಗೆ ಜಿಲ್ಲೆಯ ಜನತೆಯ ಪರವಾಗಿ ಜನಸ್ನೇಹಿ ಪೊಲೀಸ್ ಬಿರುದು ಪ್ರದಾನ ಮಾಡಲು ರಾಮನಗರ ಜಿಲ್ಲೆಯ ಎಲ್ಲಾ ಕನ್ನಡ ಪರ, ದಲಿತಪರ, ರೈತಪರ ವಿವಿಧ ಸಂಘಟನೆಗಳು ಉದ್ದೇಶಿಸಿವೆ ಎಂದು ಕರ್ನಾಟಕ ನವನಿರ್ಮಾಣ ಸೇನೆ ಅಧ್ಯಕ್ಷ ಭೀಮಾ ಶಂಕರ್ ಪಾಟೀಲ್ ತಿಳಿಸಿದರು.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಇದೇ ಅಕ್ಟೋಬರ್ 25ರ ಭಾನುವಾರ ಬೆಳಿಗ್ಗೆ 10.30ಕ್ಕೆ ನಗರದ ವೀರಭದ್ರಸ್ವಾಮಿ ಕಲ್ಯಾಣ ಮಂಟಪದಲ್ಲಿ (ರಾಮನಗರ ಪ್ಯಾಲೆಸ್) ಬಿರುದು ಪ್ರದಾನ ಮತ್ತು ನಾಗರೀಕ ಸನ್ಮಾನ ಹಮ್ಮಿಕೊಳ್ಳಲಾಗಿದೆ ಎಂದರು.

ಪೋಲೀಸ್ ಅಂದರೆ ಭಯ ಅಲ್ಲ ಭರವಸೆ

ಪೊಲೀಸ್ ಅಂದಕ್ಷಣ ಬಹಳಷ್ಟು ಜನಕ್ಕೆ ಬೇರೆ ರೀತಿಯಾ ಭಾವನೆಗಳು ಮೂಡುತ್ತವೆ. ವಿಶೇಷವಾಗಿ ಕನ್ನಡ ಹೋರಾಟಗಾರರು, ದಲಿತ ಹೋರಾಟಗಾರರು ಮತ್ತೆ ಚಳುವಳಿಗಾರರಿಗೂ ಪೊಲೀಸರ ನಡುವೆ ಎಣ್ಣೆ ಮತ್ತು ಸೀಗೆಕಾಯಿ ಸಂಬಂಧ. ಆದರೆ ರುದ್ರೇಶ್ ಅವರ ನಡವಳಿಕೆ ಪೊಲೀಸ್ ಅಂದರೆ ಭಯ ಅಲ್ಲ ಭರವಸೆ ಎಂಬಂತಿದೆ. ಎಲ್ಲಾ ಸಮುದಾಯದವರ ವಿಶ್ವಾಸವನ್ನುಗಳಿಸಿಕೊಂಡು, ಜಾತ್ಯಾತೀತವಾಗಿ, ಪಕ್ಷಾತೀತವಾಗಿ, ಧರ್ಮಾತೀತವಾಗಿ ಸಂಬಂಧವನ್ನು ಇರಿಸಿಕೊಂಡಿದ್ದಾರೆ. ರುದ್ರೇಶ್ ಅವರಿಗೆ ಸನ್ಮಾನದ ರೂಪದಲ್ಲಿ ನಾವು ಗೌರವವನ್ನು ಸಲ್ಲಿಸಬೇಕು ಎಂಬುದು ಕನ್ನಡಪರ ಸಂಘಟನೆಗಳು, ದಲಿತಪರ ಸಂಘಟನೆಗಳು, ರೈತಪರ ಸಂಘಟನೆಗಳ ಪದಾಧಿಕಾರಿಗಳು, ಸದಸ್ಯರ ಉದ್ದೇಶ ಎಂದರು.

ನಾಡಗೀತೆಗೆ 100 ವರ್ಷ, ಸರ್ಕಾರ ಮರೆತಿದೆ!

ಅಖಂಡ ಕರ್ನಾಟಕದ ಅಭಿವೃದ್ಧಿಗಾಗಿ ಕರ್ನಾಟಕ ಸರಕಾರ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ರಾಷ್ಟ್ರಕವಿ ಕುವೆಂಪು ಅವರ ನಾಡಗೀತೆಗೆ 100 ವರ್ಷ ಆಯ್ತು, ಈ 100 ವರ್ಷದ ಸಂಭ್ರಮ ಇದೆ. ಆದರೆ ಸರಕಾರಕ್ಕೆ ಅದರ ನೆನಪಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ನವೆಂಬರ್ ತಿಂಗಳಲ್ಲಿ ರಾಷ್ಟ್ರಕವಿ ಕುವೆಂಪು ವಿರಚಿತ ನಾಡಗೀತೆಗೆ 100 ವರ್ಷದ ಸಂಭ್ರಮದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು ಎಂದು ಅವರು ಸರ್ಕಾರವನ್ನು ಆಗ್ರಹಿಸಿದರು. ಒಂದು ವೇಳೆ ಸರ್ಕಾರ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳದಿದ್ದರೆ, ವಿಧಾನಸೌಧದ ಮೆಟ್ಟಿಲುಗಳ ಮೇಲೆ ಬಹಿರಂಗ ವೇದಿಕೆಯಲ್ಲಿ ನಾಡಗೀತೆಗೆ 100 ವರ್ಷದ ಸಂಭ್ರಮ ಕಾರ್ಯಕ್ರಮವನ್ನು ಕನ್ನಡ ಹೋರಾಟಗಾರರು ಮಾಡುತ್ತೇವೆ ಎಂದರು. ಮುಂಬರುವ ದಿನಗಳಲ್ಲಿ ರಾಮನಗರದಲ್ಲಿ ಅದ್ದೂರಿಯಾದಂತಹ ಕರ್ನಾಟಕ ರಾಜ್ಯೋತ್ಸವವನ್ನು ಆಚರಣೆ ಮಾಡುವಂತಹ ಸಂಕಲ್ಪವನ್ನು ಮಾಡಿದ್ದೇವೆ ಎಂದರು.

ಕಿತ್ತೂರು ರಾಣಿ ಚೆನ್ನಮ ಸಮಾಧಿ ರಾಷ್ಟ್ರೀಯ ಸ್ಮಾರಕವಾಗಲಿ!

ಬ್ರಿಟೀಷರ ವಿರುದ್ಧ ಪ್ರಥಮವಾಗಿ ಸಿಡಿದು ಸಮರವನ್ನು ಸಾರಿದ ಕಿತ್ತೂರು ರಾಣಿ ಚೆನ್ನಮ್ಮರ ಜಯಂತಿಯನ್ನು ರಾಜ್ಯ ಸರ್ಕಾರ ಆಚರಿಸುತ್ತಿದೆ. ಆದರೆ ಬ್ರಟೀಷ್ ಅಧಿಕಾರಿಗಳ ಸಮಾಧಿಗಳನ್ನು ಕೇಂದ್ರ ಸರ್ಕಾರ ರಾಷ್ಟ್ರೀಯ ಸ್ಮಾರಕ ಅಂತ ಘೋಷಿಸಿರುವುದು ದುರ್ದೈವ ಎಂದು ಬೇಸರ ವ್ಯಕ್ತಪಡಿಸಿದರು.

ಕಿತ್ತೂರು ರಾಣಿ ಚೆನ್ನಮ್ಮನ ಸಮಾಧಿಯನ್ನು ರಾಷ್ಟ್ರೀಯ ಸ್ಮಾರಕ ಎಂದು ಘೋಷಿಸಬೇಕು. ಬನಾರಸ್ ಹಿಂದೂ ವಿಶ್ವವಿದ್ಯಾಲಯದಲ್ಲಿ ರಾಣಿ ಚೆನ್ನಮ್ಮನ ಅಧ್ಯಯನ ಪೀಠವನ್ನು ಸ್ಥಾಪಿಸಬೇಕು. ವೀರ ರಾಣಿ ಚೆನ್ನಮ್ಮನ ಸ್ಮರಿಸುವಂತಹ ಕೆಲಸ ಕೇಂದ್ರ ಸರ್ಕಾರ ಮಾಡಬೇಕು ಎಂದು ಒತ್ತಾಯಿಸಿದರು. ಈ ರಾಜ್ಯದ ಎಲ್ಲಾ ಲೋಕಸಭಾ ಸದಸ್ಯರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಕೇಂದ್ರದ ಮೇಲೆ ಒತ್ತಡ ಹೇರಬೇಕು ಎಂದರು.

ರುದ್ರೇಶ್ ಸಮಾಜಮುಖಿ ಕೆಲಸ ಮಾಡಿದ್ದಾರೆ - ಶಿವಕುಮಾರಸ್ವಾಮಿ

ದಲಿತ ಸಂಘಟನೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಶಿವಕುಮಾರಸ್ವಾಮಿ ಅವರು ಮಾತನಾಡಿ, ಪೊಲೀಸ್ ರುದ್ರೇಶ್ ಅವರು ತಮ್ಮ ಸರ್ಕಾರಿ ಸೇವೆಯ ಉದ್ದಕ್ಕೂ ಸಮಾಜಮುಖಿ ಕೆಲಸವನ್ನು ಮಾಡಿದ್ದಾರೆ, ಜನಸ್ನೇಹಿ ಕೆಲಸ ಮಾಡಿದ್ದಾರೆ. ಅವರೊಬ್ಬರು ಪೊಲೀಸ್ ಅನ್ನುವುದಕ್ಕಿಂತಲೂ ಸಮಾಜದಲ್ಲಿ ಒಳ್ಳೆಯ ಹೆಸರು ಪಡೆದಿದ್ದಾರೆ. ರುದ್ರೇಶ್ ಸಾರ್ವಜನಿಕ ಸ್ನೇಹಿ ತರಾಗಿ ಕೆಲಸ ಮಾಡುತ್ತಿರುವುದರಿಂದ, ಅವರಿಗೆ ಹಮ್ಮಿಕೊಂಡಿರುವ ಕಾರ್ಯಕ್ರಮಕ್ಕೆ ನಾಗರೀಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು.

ವೇದಿಕೆ ಕಾರ್ಯಕ್ರಮಕ್ಕೆ ಮುನ್ನ ಮೆರವಣಿಗೆ - ರಾಜು.ಎಂ.ಎನ್.ಆರ್

ಕರವೇ ಜಿಲ್ಲಾ ಘಟಕದ ಅಧ್ಯಕ್ಷ ರಾಜು ಎಂ.ಎನ್.ಆರ್ ಮಾತನಾಡಿ, ಕಳೆದ 25 ವರ್ಷಗಳಿಂದ ರಾಮನಗರ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ರುದ್ರೇಶ್ ಅವರು ಹೋರಾಟಗಾರ ಒಡನಾಡಿ, ಸಾಕಷ್ಟು ವಿಚಾರಗಳಲ್ಲಿ ಸಹಾಯವನ್ನು ಮಾಡಿದ್ದಾರೆ. ಕಾನೂನುಬದ್ಧವಾಗಿ ಹೋರಾಟ ನಡೆಸಲು ಮಾರ್ಗದರ್ಶನ ನೀಡಿದ್ದಾರೆ. ಅ.25ರ ಭಾನುವಾರ ಪೊಲೀಸ್ ರದ್ರೇಶ್ ಅವರನ್ನು ಐಜೂರು ವೃತ್ತದಿಂದ ರಾಮನಗರ ಪ್ಯಾಲೆಸ್‌ವರೆಗೆ ಬೆಳ್ಳಿರಥದಲ್ಲಿ ಕೂರಿಸಿ

ಮಹಿಳೆಯರ ಸರ್ವಾಂಗೀಣ ಅಭಿವೃದ್ಧಿಗೆ ಸಮಾನ ಅವಕಾಶಗಳು ಅಗತ್ಯ: ಎನ್. ಚಲುವರಾಯಸ್ವಾಮಿ

ಮಂಡ್ಯ: ಹಿಂದೆ ಮಹಿಳೆಯರಿಗೆ ಅವಕಾಶಗಳು ಸೀಮಿತವಾಗಿದ್ದವು. ಆದರೆ ಇಂದಿನ ಕಾಲಘಟ್ಟದಲ್ಲಿ ಮಹಿಳೆಯರು ಶಿಕ್ಷಣ, ವಿಜ್ಞಾನ, ರಾಜಕೀಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಉತ್ತಮ ಅವಕಾಶಗಳು ಸೃಷ್ಟಿಯಾಗಿವೆ. ಮಹಿಳೆಯರು ಸ್ವಾವಲಂಬಿ ಜೀವನ ನಡೆಸುವ ಮೂಲಕ ಸಮಾಜದ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದಾರೆ ಎಂದು ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ರವರು ತಿಳಿಸಿದರು.

ನಗರದ ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಇಂದು ಮೈಸೂರು ದಸರಾ ಮೆರವಣಿಗೆಯಲ್ಲಿ ಮಂಡ್ಯ ಜಿಲ್ಲಾ ಪಂಚಾಯಿತಿ ವತಿಯಿಂದ ಪ್ರದರ್ಶಿಸಲಾದ ಸ್ತಬ್ಧಚಿತ್ರವು (ಅಸ್ಮಿತೆ ಸ್ತ್ರೀ ಶಕ್ತಿಯ ಅನಾವರಣ) ರಾಜ್ಯಮಟ್ಟದ ಪ್ರಶಸ್ತಿಗೆ ಪಾತ್ರವಾದ ಹಿನ್ನೆಲೆಯಲ್ಲಿ ಸ್ತಬ್ಧಚಿತ್ರವನ್ನು ವೀಕ್ಷಿಸಿ ಅವರು ಮಾತನಾಡಿದರು.

ಮಹಿಳೆಯರ ಸಬಲೀಕರಣವು ಸಮಾಜದ ಪ್ರಗತಿಯ ಪ್ರಮುಖ ಆಧಾರವಾಗಿದೆ. ಇಂದು ಶಿಕ್ಷಣ ಪಡೆದ ಮಹಿಳೆಯರಷ್ಟೇ ಅಲ್ಲದೆ, ಔಪಚಾರಿಕ ಶಿಕ್ಷಣದಿಂದ ವಂಚಿತರಾದ ಮಹಿಳೆಯರೂ ಕೃಷಿ, ಹೈನುಗಾರಿಕೆ ಸೇರಿದಂತೆ ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಆರ್ಥಿಕ ಸ್ವಾವಲಂಬನೆ ಸಾಧಿಸುತ್ತಿದ್ದಾರೆ. ಮಹಿಳೆಯರಿಗೆ ಸೂಕ್ತ ಪ್ರೋತ್ಸಾಹ ಮತ್ತು ಅವಕಾಶಗಳನ್ನು ಕಲ್ಪಿಸಿದಾಗ ಅವರು ತಮ್ಮ ಸಾಮರ್ಥ್ಯವನ್ನು ಸಮರ್ಥವಾಗಿ ಅನಾವರಣಗೊಳಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ವಿಜ್ಞಾನ ಮತ್ತು ಸ್ಪರ್ಧಾತ್ಮಕ ಮನೋಭಾವ ಬೆಳೆಸುವ ಉದ್ದೇಶದಿಂದ ಚಿತ್ರಕಲೆ ಸ್ಪರ್ಧೆ, ರಸಪ್ರಶ್ನೆ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಆಯೋಜಿಸಲಾಗುತ್ತಿದೆ. ವಿದ್ಯಾರ್ಥಿಗಳು ಇಂತಹ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ತಮ್ಮ ಪ್ರತಿಭೆಯನ್ನು ಗುರುತಿಸಿಕೊಂಡು ಭವಿಷ್ಯದಲ್ಲಿ ಉತ್ತಮ ಸಾಧನೆ ಮಾಡುವತ್ತ ಮುನ್ನಡೆಯಬೇಕು ಎಂದು ಅವರು ಕರೆ ನೀಡಿದರು.

ಮಹಿಳೆಯರು ಮತ್ತು ವಿದ್ಯಾರ್ಥಿಗಳಿಗೆ ದೊರೆಯುವ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮೂಲಕ ವೈಯಕ್ತಿಕ ಪ್ರಗತಿಯೊಂದಿಗೆ ಸಮಾಜದ ಅಭಿವೃದ್ಧಿಗೂ ಕೊಡುಗೆ ನೀಡಬೇಕು ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದರು.

ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ. ರವಿಕುಮಾರ್ ರವರು ಮಾತನಾಡಿ ಮೈಸೂರು ದಸರಾ ಮಹೋತ್ಸವದ ಮೆರವಣಿಗೆಯಲ್ಲಿ ಮಂಡ್ಯ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ ವತಿಯಿಂದ ಪ್ರದರ್ಶಿಸಲಾದ ಸ್ತಬ್ಧಚಿತ್ರವು ವ್ಯಾಪಕ ಪ್ರಶಂಸೆಗೆ ಪಾತ್ರವಾಗಿ ರಾಜ್ಯಮಟ್ಟದ ಪ್ರಶಸ್ತಿ ಗಳಿಸಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಅವರು ತಿಳಿಸಿದರು.

ಸ್ತಬ್ಧಚಿತ್ರದ ಯಶಸ್ಸಿನಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಅವರ ಪಾತ್ರ ಮಹತ್ವದ್ದಾಗಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಸ್ತಬ್ಧಚಿತ್ರದ ಪರಿಕಲ್ಪನೆ ಹಾಗೂ ಅದರ ಮಹತ್ವವನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಉದ್ದೇಶದಿಂದ ಪ್ರಬಂಧ ಸ್ಪರ್ಧೆ ಹಾಗೂ ರಸಪ್ರಶ್ನೆ ಸ್ಪರ್ಧೆಗಳನ್ನು ಆಯೋಜಿಸಿ, ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಲು ಅವಕಾಶ ಕಲ್ಪಿಸಲಾಗುವುದು. ಸ್ಪರ್ಧೆಗಳಲ್ಲಿ ವಿಜೇತರಾಗುವವರಿಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನಗಳನ್ನು ನೀಡಲಾಗುವುದು ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ 'ಭಾರತ್ ಜೋಡೋ ಯುವಕರ ಸಂಘ'ದಲ್ಲಿ ನೋಂದಣಿ ಮಾಡಿಕೊಂಡು ಸಂಘಟನೆಯ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಶಾಸಕರಾದ ಪಿ. ರವಿಕುಮಾರ್ ರವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಪಿ ಪ್ರಕಾಶ್,ಜಿಲ್ಲಾಧಿಕಾರಿಗಳಾದ ಡಾ. ಕುಮಾರ,ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಕೆ. ಆರ್.ನಂದಿನಿ, ಅಪರ ಜಿಲ್ಲಾಧಿಕಾರಿಗಳಾದ ಬಿ.ಸಿ ಶಿವಾನಂದಮೂರ್ತಿ, ಮಂಡ್ಯ ಉಪ ವಿಭಾಗಾಧಿಕಾರಿಗಳಾದ ಶಿವಮೂರ್ತಿ, ಮಂಡ್ಯ ವಿಶ್ವ ವಿದ್ಯಾಲಯದ ಕುಲಪತಿಗಳಾದ ಕಲ್ಪಶ್ರೀ ರವರು ಉಪಸ್ಥಿತರಿದ್ದರು.

ತಗಡೂರಿನಲ್ಲಿ ವಿಜಯದಶಮಿ ಹಬ್ಬದ ಸಂಭ್ರಮ

ಚನ್ನರಾಯಪಟ್ಟಣ: ಚನ್ನರಾಯಪಟ್ಟಣ ತಾಲೂಕು ತಗಡೂರು ಗ್ರಾಮದಲ್ಲಿ ಗಣೇಶೋತ್ಸವ ಮತ್ತು ವಿಜಯದಶಮಿ ಸಂಭ್ರಮ ಸಗಡರದಿಂದ ನಡೆಯಿತು.

ಶ್ರೀ ಸಿದ್ದಲಿಂಗೇಶ್ವರ ಸ್ವಾಮಿ ದೇವರ ಜೊತೆಗೆ ಗಣಪತಿಯ ಮೆರವಣಿಗೆ ಗ್ರಾಮದ ಬೀದಿಯಲ್ಲಿ ಸಾಗಿ ಬನ್ನಿ ಮಂಟಪ ತಲುಪಿತು. ಈ ಸಂದರ್ಭದಲ್ಲಿ ಮಹಾ ಮಂಗಳಾರತಿ ಬಳಿಕ ವಿಜಯದಶಮಿ ಪ್ರಯುಕ್ತ ಅಂಬು ಹಾಯುವುದಕ್ಕೆ ಚಾಲನೆ ನೀಡಲಾಯಿತು.

ಲಿಂಗದವೀರರ ಕುಣಿತ, ತಗಡೂರು ಸುಗ್ಗಿ ಕುಣಿತ, ಹಲಗೆ ಕುಣಿತ ಮತ್ತಿತರ ಕಾರ್ಯಕ್ರಮಗಳು ನಡೆದವು.

ಬಳಿಕ ತತ್ಸಂಪ್ರದಾಯದಂತೆ ಬನ್ನಿ ಮಂಟಪದಿಂದ ಬಾಳೆ ಗಿಡಕ್ಕೆ ಕೋವಿ ಹೊಡೆಯುವ ಮೂಲಕ ವಿಜಯದಶಮಿ ಹಬ್ಬವನ್ನು ಸಂಭ್ರಮಿಸಲಾಯಿತು. ಬಳಿಕ ಸಾಮೂಹಿಕವಾಗಿ ಪ್ರಸಾದ ವಿತರಣೆ ನಡೆಯಿತು. ಗಣಪತಿಯನ್ನು ಊರ ಕೆರೆಯಲ್ಲಿ ವಿಸರ್ಜನೆ ಮಾಡಲಾಯಿತು.

ಮೈಸೂರು ಅರಮನೆಯಲ್ಲಿ ಅರಸರು ವಿಜಯದಶಮಿ ಹಬ್ಬ ಆಚರಣೆ ಮಾಡುವ ಮಾದರಿಯಲ್ಲಿಯೇ ತಗಡೂರಿನಲ್ಲಿಯೂ ಬನ್ನಿ ಮಂಟಪದ ಬಳಿ ವಿಜಯದಶಮಿ ಹಬ್ಬ ಆಚರಣೆ ಮಾಡಿಕೊಂಡು ಬಂದಿರುವುದು ವಿಶೇಷ.

ವಿಜಯದಶಮಿ ಹಬ್ಬದ ಸಂಭ್ರಮದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಸೇರಿದಂತೆ ಗ್ರಾಮದ ಪ್ರಮುಖರು, ಗಣ್ಯರು ಭಾಗವಹಿಸಿದ್ದರು.

ಶಾಸಕರಾದ ಡಾ.ಮಂತರ್ ಗೌಡ ಅವರ ನೇತೃತ್ವದಲ್ಲಿ 'ಸ್ವಚ್ಛತಾ ಅಭಿಯಾನ'

ಮಡಿಕೇರಿ: ದಸರಾ ಹಬ್ಬ ಹಿನ್ನೆಲೆ ನವರಾತ್ರಿ ಉತ್ಸವಕ್ಕೆ ಸಾಕ್ಷಿಯಾಗಿದ್ದ ನಗರದ ಗಾಂಧಿ ಮೈದಾನದಲ್ಲಿ ಸ್ವಚ್ಛತಾ ಅಭಿಯಾನವು ಶುಕ್ರವಾರ ನಡೆಯಿತು.

ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಮಂತರ್ ಗೌಡ ಅವರು ಸ್ವಚ್ಛತಾ ಸೇನಾನಿಗಳಾದ ಪೌರಕಾರ್ಮಿಕರ ಜೊತೆ ಸ್ವಚ್ಛತಾ ಅಭಿಯಾನದಲ್ಲಿ ಕೈಜೋಡಿಸಿ, ಗಮನ ಸೆಳೆದರು.

ಈ ಸಂದರ್ಭ ಮಾತನಾಡಿದ ಶಾಸಕರು, ಹಬ್ಬ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳು ಮುಗಿದ ಬಳಿಕ ಸ್ವಚ್ಛತೆ ಕಾಪಾಡುವುದು ಕೇವಲ ಒಂದು ದಿನದ ಕೆಲಸವಲ್ಲ. ವರ್ಷದ 365 ದಿನವೂ ಪರಿಸರ ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಸ್ವಚ್ಛತಾ ಕಾರ್ಯವು ಎಲ್ಲರ ಕರ್ತವ್ಯ ಮತ್ತು ಜವಾಬ್ದಾರಿಯಾಗಿದೆ. ಸಾರ್ವಜನಿಕರಲ್ಲಿ ಸ್ವಚ್ಛತೆಯ ಬಗ್ಗೆ ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಪ್ಲಾಸ್ಟಿಕ್ ಸೇರಿದಂತೆ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯದೆ, ನಿಗದಿತ ಕಸದ ತೊಟ್ಟಿಗಳಲ್ಲಿ ಹಾಕುವ ಅಭ್ಯಾಸವನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು ಎಂದು ಶಾಸಕರು ತಿಳಿಸಿದರು.

ದಸರಾ ಸಂದರ್ಭದಲ್ಲಿ ನಗರದ ವಿವಿಧೆಡೆ ಕಸದ ತೊಟ್ಟಿಗಳನ್ನು ಇರಿಸಲಾಗಿರುತ್ತದೆ. ಸಾರ್ವಜನಿಕರು ಅವುಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ರಸ್ತೆಗಳಲ್ಲೇ ಕಸ ಎಸೆಯುವುದನ್ನು ನಿಲ್ಲಿಸಿ, ಪೌರಕಾರ್ಮಿಕರೊಂದಿಗೆ ಕೈಜೋಡಿಸುವ ಮನೋಭಾವ ಬೆಳೆಸಿಕೊಳ್ಳಬೇಕು.

ಚೆನ್ನಮ್ಮರ ತ್ಯಾಗ ಮತ್ತು ಶೌರ್ಯದ ಬದುಕು ಎಲ್ಲರಿಗೂ ಆದರ್ಶ

ಮಡಿಕೇರಿ: ಬ್ರಿಟಿಷರ ಆಡಳಿತದ ವಿರುದ್ಧ ಪ್ರಥಮ ಬಾರಿಗೆ ಕಹಳೆ ಮೊಳಗಿಸಿ, ಮಾತೃಭೂಮಿಯ ಸ್ವಾತಂತ್ರ್ಯ ಹಾಗೂ ಸ್ವಾಭಿಮಾನಕ್ಕಾಗಿ ಹೋರಾಡಿದ ಕಿತ್ತೂರು ರಾಣಿ ಚೆನ್ನಮ್ಮರ ಜೀವನ ಮತ್ತು ಶೌರ್ಯದ ಪಯಣ ಪ್ರತಿಯೊಬ್ಬರಿಗೂ ಸದಾ ಆದರ್ಶಪ್ರಾಯವಾಗಿದೆ ಎಂದು ಕೊಡಗು ಜಿಲ್ಲಾ ಮಹಿಳಾ ಬರಹಗಾರರ ಸಂಘದ ಅಧ್ಯಕ್ಷರಾದ ಪುದಿಯನೆರವನ ರೇವತಿ ರಮೇಶ್ ತಿಳಿಸಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಗರದ ಗಾಂಧಿ ಭವನದಲ್ಲಿ ಶುಕ್ರವಾರ ನಡೆದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಉಪನ್ಯಾಸ ನೀಡಿದರು.

ಕಿತ್ತೂರು ಸಂಸ್ಥಾನದ ಶೌರ್ಯದ ಸಂಕೇತವಾಗಿರುವ ರಾಣಿ ಚೆನ್ನಮ್ಮನವರ ವೀರಗಾಥೆಯು ಇಂದಿನ ಯುವ ಪೀಳಿಗೆಗೆ ದೇಶಪ್ರೇಮ, ಧೈರ್ಯ ಮತ್ತು ಸ್ವಾಭಿಮಾನದ ದೊಡ್ಡ ಪಾಠವಾಗಿದೆ. ರಾಣಿ ಚೆನ್ನಮ್ಮ ಕೇವಲ ಒಂದು ಪ್ರದೇಶದ ರಾಣಿಯಾಗಿರದೆ, ಇಡೀ ಭಾರತೀಯ ನಾರೀಶಕ್ತಿಯ ಹಾಗೂ ಸ್ವಾತಂತ್ರ್ಯ ಹೋರಾಟದ ದಿವ್ಯ ಜ್ಯೋತಿಯಾಗಿದ್ದಾರೆ ಎಂದು ಹೇಳಿದರು.

ಭಾರತದ ಸ್ವಾತಂತ್ರ್ಯ ಸಂಗ್ರಾಮದ ಇತಿಹಾಸದಲ್ಲಿ ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಯ ವಿರುದ್ಧ ಪ್ರಥಮ ಬಾರಿಗೆ ಸಮರ ಸಾರಿದ ದೇಶದ ಮೊಟ್ಟಮೊದಲ ವೀರ ವನಿತೆ ಕಿತ್ತೂರು ರಾಣಿ ಚೆನ್ನಮ್ಮ ಅವರು, ಪತಿ ಮತ್ತು ಪುತ್ರನನ್ನು ಕಳೆದುಕೊಂಡರು ಯಾವುದಕ್ಕೂ ಎದೆಗುಂದದೆ ಬ್ರಿಟಿಷರ ವಿರುದ್ಧ ಹೋರಾಡಿದ ದಿಟ್ಟ ಮಹಿಳೆ. ರಾಣಿ ಚೆನ್ನಮ್ಮರು ಕನ್ನಡಮ್ಮನ ಮಗಳು ಎಂದು ಹೇಳಿದರು.

ಮಾತೃಭೂಮಿಯ ರಕ್ಷಣೆ ಮತ್ತು ನಾಡಿನ ಸ್ವಾಭಿಮಾನಕ್ಕಾಗಿ ಬ್ರಿಟಿಷರ ವಿರುದ್ಧವೇ ದಿಟ್ಟತನದಿಂದ ರಣರಂಗಕ್ಕಿಳಿದ ಕಿತ್ತೂರು ರಾಣಿ ಚೆನ್ನಮ್ಮರ ಶೌರ್ಯ ಮತ್ತು ಸಾಹಸಮಯ ಹೋರಾಟವು ಇಂದಿಗೂ ಇಡೀ ಭಾರತಕ್ಕೆ ಕ್ರಾಂತಿಯ ಕಿಡಿಯಾಗಿದೆ. ರಣರಂಗದಲ್ಲಿ ಖಡ್ಗ ಹಿಡಿದು ಶತ್ರುಪಡೆಗಳನ್ನು ಸೀಳಿ ಬೆಳೆದ ಅವರ ದಿಟ್ಟ ನಾಯಕತ್ವವು ಭಾರತೀಯ ಸ್ವಾತಂತ್ರ್ಯ ಸಂಗ್ರಾಮದ ಇತಿಹಾಸದಲ್ಲಿ ಸುವರ್ಣ ಅಕ್ಷರಗಳಲ್ಲಿ ದಾಖಲಾಗಿದೆ ಎಂದು ತಿಳಿಸಿದರು.

ನಾಡಿನ ರಕ್ಷಣೆಗಾಗಿ ತಮ್ಮ ಪ್ರಾಣವನ್ನೇ ಪಣಕ್ಕಿಟ್ಟು ಹೋರಾಡಿದ ಅವರ ತಪೋಮಯ ಬದುಕು ಇಂದಿನ ಸಮಾಜಕ್ಕೆ ಪ್ರೇರಣೆಯಾಗಿದೆ. ಚೆನ್ನಮ್ಮನವರ ಆದರ್ಶ, ತ್ಯಾಗ ಮತ್ತು ದೇಶಪ್ರೇಮದ ಮೌಲ್ಯಗಳನ್ನು ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ ಎಂದರು.

ಮಡಿಕೇರಿ ತಹಶೀಲ್ದಾರರಾದ ಗುರುರಾಜ್ ಅವರು ಕಾರ್ಯಕ್ರಮ ಉದ್ಘಾಟಿಸಿ, ಶುಭಕೋರಿದರು. ಕಾರ್ಯಕ್ರಮದ ಮುನ್ನ ಗಣ್ಯರು ಕಿತ್ತೂರು ರಾಣಿ ಚೆನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಹೊಸ ಯುಗದ ಆರೋಗ್ಯ ಮಂತ್ರಗಳು

ಇಂದಿನ ಆರೋಗ್ಯದ ವ್ಯಾಖ್ಯಾನವು ರೋಗದ ಅನುಪಸ್ಥಿತಿಯನ್ನು ಮೀರಿದೆ. ಅದು ದೇಹ, ಮನಸ್ಸು ಮತ್ತು ಪರಿಸರದ ನಡುವಿನ ಸುಂದರ ಸಮತೋಲನ. ಒಳಗಿನ ಲಯ ತಪ್ಪಿದರೆ ಹೊರಗಿನ ಬದುಕೂ ಅಪಶ್ರುತವಾಗುತ್ತದೆ. ಈ ಸಮಗ್ರ ದೃಷ್ಟಿಯೇ ಹೊಸ ಯುಗದ ಮೊದಲ ಮಂತ್ರ. ವೈದ್ಯ ವಿಜ್ಞಾನವು ನಮ್ಮ ಕರುಳಿನ ಸೂಕ್ಷ್ಮ ಜೀವಿ ಲೋಕದ ಮಹತ್ವವನ್ನು ತೆರೆದಿಟ್ಟಿದೆ. ಈ ಅದೃಶ್ಯ ಪರಿಸರವು ಜೀರ್ಣಕ್ರಿಯೆ ಮಾತ್ರವಲ್ಲ, ರೋಗನಿರೋಧಕ ಶಕ್ತಿ ಮತ್ತು ಮನಸ್ಥಿತಿಯನ್ನೂ ನಿಯಂತ್ರಿಸುತ್ತದೆ. ಆದ್ದರಿಂದ ವೈವಿಧ್ಯಮಯ, ಸ್ಥಳೀಯ ಮತ್ತು ಋತುಮಾನದ ಆಹಾರ ಸೇವನೆಯು ಕೇವಲ ಅಭ್ಯಾಸವಲ್ಲ, ಆರೋಗ್ಯದ ಹೂಡಿಕೆ. ಡಿಜಿಟಲ್ ಪರದೆಗಳ ನಿರಂತರ ಬೆಳಕು ಕಣ್ಣು, ಕುತ್ತಿಗೆ ಮತ್ತು ಏಕಾಗ್ರತೆಯ ಮೇಲೆ ನೆರಳು ಬೀರುತ್ತಿದೆ. ಪ್ರಜ್ಞಾಪೂರ್ವಕ ಡಿಜಿಟಲ್ ಉಪವಾಸ, ಪ್ರತಿದಿನದ ಮೌನದ ಕೆಲವು ಕ್ಷಣಗಳು ಮೆದುಳಿಗೆ ಮರುಚೈತನ್ಯ ನೀಡುತ್ತವೆ. ಜೊತೆಗೆ ಶುದ್ಧ ಗಾಳಿ, ಸುರಕ್ಷಿತ ನೀರು ಮತ್ತು ಸ್ವಚ್ಛ ಪರಿಸರವಿಲ್ಲದೆ ವೈಯಕ್ತಿಕ ಆರೋಗ್ಯ ಅಪೂರ್ಣ.

ಆರೋಗ್ಯವೆಂದರೆ ಜಾಗೃತಿ. ದೇಹದ ಪಿಸುಮಾತುಗಳನ್ನು ಆಲಿಸುವ ವಿವೇಕ, ಜ್ಞಾನಾಧಾರಿತ ಆಯ್ಕೆ ಮತ್ತು ಪ್ರಕೃತಿಯೊಂದಿಗೆ ಸ್ನೇಹವೇ ನಿಜವಾದ ಪ್ರಗತಿ. ವೇಗದ ಜಗತ್ತಿನಲ್ಲಿ ನಿಧಾನವಾಗಿ ಆರೋಗ್ಯವನ್ನು ಆದ್ಯತೆಯಾಗಿಸುವುದೇ ದೀರ್ಘಾಯುಷ್ಯದ ಶ್ರೀಮಂತಿಕೆ.

ಅಂಕಣ- 51
ಸಾವು ಸಂಕಟಪಡುವ ಸಂಗತಿಗಳು..!

|ಡಾ.ಸುಧಾಕರ.ಜಿ.ಲಕ್ಕವಳ್ಳಿ
87479 69381

ನಾನು ಸೋಮಣ್ಣ ನನ್ನ ತಪ್ಪೇನು?

ನನ್ನ ಹೆಸರು ಸೋಮಣ್ಣ. ನಾನು ಮಾತನಾಡಲಾರೆ. ನನ್ನ ಮನಸ್ಸಿನ ನೋವನ್ನು ಅಕ್ಷರಗಳಲ್ಲಿ ಬರೆದು ತೋರಿಸಲಾರೆ. ಆದರೆ ನನಗೂ ಭಾವನೆಗಳಿವೆ, ಭಯವಿದೆ, ನೋವಿದೆ, ನನ್ನದೇ ಆದ ಅಸಹಾಯಕತೆಯಿದೆ. ಮನುಷ್ಯರಂತೆ ನನ್ನ ಮನಸ್ಸಿನ ಮಾತುಗಳನ್ನು ವಿವರಿಸುವ ಭಾಷೆ ನನಗಿಲ್ಲ. ಅದಕ್ಕೇನಂತೆ? ನನ್ನ ಮೌನವನ್ನು ಅರ್ಥಮಾಡಿಕೊಳ್ಳುವ ಹೃದಯಗಳೂ ಈ ಜಗತ್ತಿನಲ್ಲಿ ಇಲ್ಲವೇ?

ಅಂದು ಶಿವಮೊಗ್ಗದ ದಸರಾ. ಬೀದಿಗಳೆಲ್ಲ ಸಂಭ್ರಮದಿಂದ ಕಂಗೊಳಿಸುತ್ತಿದ್ದವು. ಜನರ ಮುಖಗಳಲ್ಲಿ ಹಬ್ಬದ ಉತ್ಸಾಹ. ವಾದ್ಯಗಳ ಅಬ್ಬರ, ಜನರ ಜಯಘೋಷ, ಪಟಾಕಿಗಳ ಸದ್ದು, ಕ್ಯಾಮೆರಾಗಳ ಬೆಳಕು?ಎಲ್ಲೆಲ್ಲೂ ಹಬ್ಬದ ವಾತಾವರಣ. ನನ್ನ ಬೆನ್ನಿನ ಮೇಲೆ ಬೆಳ್ಳಿಯ ಅಂಬಾರಿ. ಅದರೊಳಗೆ ತಾಯಿ ಚಾಮುಂಡೇಶ್ವರಿಯ ವಿಗ್ರಹ. ಸಾವಿರಾರು ಕಣ್ಣುಗಳು ನನ್ನತ್ತ ನೆಟ್ಟಿದ್ದವು. ನನ್ನ ಹೆಜ್ಜೆಗಳಲ್ಲಿ ಗಾಂಭೀರ್ಯವನ್ನೂ, ನನ್ನ ನಡಿಗೆಯಲ್ಲಿ ಭಕ್ತಿಯನ್ನೂ ಜನರು ಕಾಣಬೇಕೆಂದು ಬಯಸಿದ್ದರು.

ಆದರೆ ಆ ಜನಸಾಗರದ ನಡುವೆ ನನ್ನ ಮನಸ್ಸಿನಲ್ಲಿ ಏನು ನಡೆಯುತ್ತಿತ್ತು ಎಂಬುದನ್ನು ಯಾರಾದರೂ ಯೋಚಿಸಿದ್ದರೇ?

ನಾನು ಆನೆ. ಕಾಡಿನ ವಿಶಾಲತೆಯಲ್ಲಿ ನಡೆಯಬೇಕಾದವನು. ನನ್ನ ಕಿವಿಗಳಿಗೆ ಪರಿಚಿತವಾದುದು ಕಾಡಿನ ಗಾಳಿ, ಮರಗಳ ಮರ್ಮರ, ಹಕ್ಕಿಗಳ ಕಲರವ. ಆದರೆ ಇಲ್ಲಿ ಕಿವಿಗಪ್ಪಳಿಸುತ್ತಿದ್ದದ್ದು ಕಿವಿಗಡಚಿಕ್ಕುವ ವಾದ್ಯಗಳ ಸದ್ದು, ಜನರ ಕೂಗಾಟ, ಪಟಾಕಿಗಳ ಸದ್ದಿನ ಆಘಾತ. ನನ್ನ ಸುತ್ತಲೂ ಜನಸಾಗರ. ಮುಂದೆ ಹೋಗಲೂ ದಾರಿಯಿಲ್ಲ, ಹಿಂದೆ ಸರಿಯಲೂ ನೆಮ್ಮದಿಯಿಲ್ಲ. ನನ್ನ ಭಯವನ್ನು ಹೇಳಿಕೊಳ್ಳಲು ಮಾತುಗಳಿಲ್ಲ.

ನನ್ನನ್ನು ನಿಯಂತ್ರಿಸಲು ಪ್ರಯತ್ನಿಸುತ್ತಿದ್ದ ನನ್ನ ಮಾವುತನಿಗೂ ತನ್ನದೇ ಆದ ಅಸಹಾಯಕತೆ ಇತ್ತು. ಅವನಿಗೂ ಅಪಾಯವಾಗಬಾರದೆಂಬ ಆತಂಕ ನನ್ನೊಳಗಿತ್ತು. ಆದರೆ ಭಯಗೊಂಡ ನನ್ನ ಮನಸ್ಸನ್ನು ಆ ಕ್ಷಣದಲ್ಲಿ ಯಾರು ಅರ್ಥಮಾಡಿಕೊಳ್ಳಬಲ್ಲರು?

ಹಠಾತ್ತನೆ ನನ್ನೊಳಗೆ ಏನೋ ಆತಂಕದ ಅಲೆ ಎದ್ದಿತು. ಸುತ್ತಲಿನ ಗದ್ದಲದ ನಡುವೆ ನನಗೆ ದಿಕ್ಕೇ ತೋಚಲಿಲ್ಲ. ನನ್ನನ್ನು ನಾನು ಸಂಭಾಳಿಸಿಕೊಳ್ಳಲಾಗದೆ ಓಡತೊಡಗಿದೆ. ನನ್ನ ಬೆನ್ನಿನ ಮೇಲಿದ್ದ ಅಂಬಾರಿ ಕೆಳಗೆ ಬಿತ್ತು. ಜನರು ದಿಕ್ಕಾಪಾಲಾಗಿ ಓಡಿದರು. ವಾಹನಗಳು ಜಖಂಗೊಂಡವು. ಹಬ್ಬದ ಸಂಭ್ರಮ ಕ

ಅರ್ಜಿ ಆಹ್ವಾನ

ಮಡಿಕೇರಿ: ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆಯಲ್ಲಿ 2026 ರ ಡಿಸೆಂಬರ್, 23 ರಿಂದ 25 ರಂದು ಬಾಗಲಕೋಟೆಯ ಉದ್ಯಾನಗಿರಿಯ ಮುಖ್ಯ ಆವರಣದಲ್ಲಿ "ಹವಾಮಾನ ವೈಪರಿತ್ಯದಲ್ಲಿ ಸುಸ್ಥಿರ ತೋಟಗಾರಿಕೆ" ಎಂಬ ಧ್ಯೇಯದೊಂದಿಗೆ 'ತೋಟಗಾರಿಕೆ ಮೇಳ-2026'ವನ್ನು ಹಮ್ಮಿಕೊಳ್ಳಲಾಗಿದೆ.

ಈ ತೋಟಗಾರಿಕೆ ಮೇಳದಲ್ಲಿ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆಯ ವ್ಯಾಪ್ತಿಯಲ್ಲಿ ಬರುವ ರಾಜ್ಯದ 25 ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಗೆ ಒಬ್ಬ ಶ್ರೇಷ್ಠ ತೋಟಗಾರಿಕೆ ರೈತ/ರೈತ ಮಹಿಳೆ ಆಯ್ಕೆ ಮಾಡಿ ಸೂಕ್ತ ಬಹುಮಾನದೊಂದಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವುದು.

ಈ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಲು ಬಯಸುವ ಮೈಸೂರು, ಮಂಡ್ಯ, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಗಳ ತೋಟಗಾರಿಕೆ ರೈತ/ರೈತ ಮಹಿಳೆಯರು ಅರ್ಜಿ ನಮೂನೆಯನ್ನು ಡೀನ್, ತೋಟಗಾರಿಕೆ ಮಹಾವಿದ್ಯಾಲಯ, ಯಲಚಹಳ್ಳಿ, ಇಲವಾಲ, ಮೈಸೂರು 571130 ಇಲಾಖೆಯಿಂದ ಅಥವಾ ತೋ.ವಿ.ವಿ.ಯ ವೆಬ್‌ಸೈಟ್: www.uhsbagalkot.karnataka.gov.in ಮೂಲಕ ಪಡೆದುಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಯನ್ನು ನವೆಂಬರ್, 09 ರ ಸಂಜೆ 5 ಗಂಟೆಯೊಳಗೆ ಡೀನ್, ತೋಟಗಾರಿಕೆ ಮಹಾವಿದ್ಯಾಲಯ, ಯಲಚಹಳ್ಳಿ, ಇಲವಾಲ, ಮೈಸೂರು 571130, ಇವರಿಗೆ ಸಲ್ಲಿಸುವುದು. ಹೆಚ್ಚಿನ ವಿವರಗಳಿಗೆ 8147959226 / 9341997297 ಈ ನಂಬರುಗಳಿಗೆ ಕರೆ ಮಾಡಬಹುದು.

ಅ.26 ರಂದು ಮಹರ್ಷಿ ವಾಲ್ಮೀಕಿ ಜಯಂತಿ



ಮಡಿಕೇರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಸಮಾರಂಭವು ಅಕ್ಟೋಬರ್, 26 ರಂದು ಬೆಳಗ್ಗೆ 10.30 ಗಂಟೆಗೆ ನಗರದ ಗಾಂಧಿ ಭವನದಲ್ಲಿ ನಡೆಯಲಿದೆ.

ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಪಿ.ಎಂ.ನರೇಂದ್ರ ಸ್ವಾಮಿ, ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಮಂತರ್ ಗೌಡ, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಹಾಗೂ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎ.ಎಸ್.ಪೊನ್ನಣ್ಣ, ಸಂಸದರಾದ ಯದುವೀರ್ ಕೃ?ದತ್ತ ಚಾಮರಾಜ ಒಡೆಯರ್, ರಾಜ್ಯಸಭಾ ಸದಸ್ಯರಾದ ಅಜಯ್ ಮಾಕನ್, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್. ಮೆಹರೋಜ್ ಖಾನ್, ವಿಧಾನ ಪರಿ?ತ್ ಶಾಸಕರಾದ ಎಂ.ಪಿ.ಸುಜಾ ಕುಶಾಲಪ್ಪ, ಎಸ್.ಎಲ್.ಭೋಜೇಗೌಡ, ಡಾ.ಧನಂಜಯ ಸರ್ಜಿ, ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷರಾದ ಸಿ.ಎಸ್.ಅರುಣ್ ಮಾಚಯ್ಯ, ಮಡಿಕೇರಿ ನಗರಸಭೆ ಅಧ್ಯಕ್ಷರಾದ ಪಿ.ಕಲಾವತಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನು?ಾನ ಸಮಿತಿ ಅಧ್ಯಕ್ಷರಾದ ತೀತಿರ ಧರ್ಮಜ ಉತ್ತಪ್ಪ, ಕೊಡಗು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎನ್.ವಿ.ಪ್ರಸಾದ್, ಪಿರಿಯಾಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಬಿ.ನಂಜುಂಡಸ್ವಾಮಿ, ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಆರ್. ಎನ್.ಬಿಂದುಮಣಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಇಲಾಖೆಯ ಯೋಜನಾ ಸಮನ್ವಯಾಧಿಕಾರಿ ಎಚ್.ಸಿ.ಭಾಗೀರಥಿ, ಇತರರು ಪಾಲ್ಗೊಳ್ಳಲಿದ್ದಾರೆ.

ಅ.26 ರಂದು ಸಾಮೂಹಿಕ ಸತ್ಯನಾರಾಯಣ ಪೂಜೆ

ಮಡಿಕೇರಿ: ಭಾಗಮಂಡಲದ ಶ್ರೀ ಭಗಂಡೇಶ್ವರ ದೇವಾಲಯದಲ್ಲಿ ಅಕ್ಟೋಬರ್, 26 ರಂದು ಸಂಜೆ 4 ಗಂಟೆಯಿಂದ ಸಾಮೂಹಿಕ ಸತ್ಯನಾರಾಯಣ ಪೂಜೆ ನಡೆಯಲಿದೆ. ಆದ್ದರಿಂದ ಎಲ್ಲಾ ಭಕ್ತಾದಿಗಳು ದೇವಾಲಯದಲ್ಲಿ ನಡೆಯಲಿರುವ ಸಾಮೂಹಿಕ ಸತ್ಯನಾರಾಯಣ ಪೂಜೆಯಲ್ಲಿ ಭಾಗವಹಿಸಿ ಪೂಜೆಯನ್ನು ಯಶಸ್ವಿಗೊಳಿಸಬೇಕಾಗಿ ದೇವಾಲಯದ ವ್ಯವಸ್ಥಾಪನ ಸಮಿತಿ ಅಧ್ಯಕ್ಷರಾದ ಪ್ರಥ್ಯೂ ಬಿ.ಎನ್. ಅವರು ಕೋರಿದ್ದಾರೆ.

ಜಿಲ್ಲಾ ಪ್ರವಾಸ

ಮಡಿಕೇರಿ: ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರು(ರಾಜ್ಯ ಸಚಿವರ ಸ್ಥಾನಮಾನ) ಪಿ.ರಫು ಮತ್ತು ಸದಸ್ಯರಾದ ಸಿ.ಶಂಕರ ಅಂಕನಶೆಟ್ಟಿಪುರ ಅವರು ಅಕ್ಟೋಬರ್, 31 ರಂದು ಕೊಡಗು ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಮಾನ್ಯ ಅಧ್ಯಕ್ಷರು ಮತ್ತು ಸದಸ್ಯರು ಅಕ್ಟೋಬರ್, 31 ರಂದು ಬೆಳಗ್ಗೆ 10.30 ಗಂಟೆಗೆ ಕೊಡಗು ಜಿಲ್ಲೆಯ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಪೌರಕಾರ್ಮಿಕರು ಮತ್ತು ಇತರೆ ಸಂಸ್ಥೆಗಳ ಸ್ವಚ್ಛತಾ ಕಾರ್ಮಿಕರೊಂದಿಗೆ ನೇರ ಸಂವಾದ ನಡೆಸಲಿದ್ದಾರೆ.

ನಂತರ ಮಧ್ಯಾಹ್ನ 12.30 ಗಂಟೆಗೆ ಕೊಡಗು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆ ಗ್ರಾಮ ಪಂಚಾಯಿತಿಗಳು ಮತ್ತು ಇತರೆ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಕಾರ್ಮಿಕರು/ ಪೌರಕಾರ್ಮಿಕರಿಗೆ ಸಂಬಂಧಿಸಿದಂತೆ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಎನ್. ರಾಘವೇಂದ್ರ ಅವರು ತಿಳಿಸಿದ್ದಾರೆ.

ಟನ್ ಕಬ್ಬಿಗೆ 5500 ರೂ. ಬೆಲೆ ನಿಗದಿಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ

ರೈತರಿಂದ ಬೆಂಗಳೂರು-ಮೈಸೂರು ಹೆದ್ದಾರಿ ಬಂದ್

ಮಂಡ್ಯ: ಕಬ್ಬಿನ ಉತ್ಪಾದನಾ ವೆಚ್ಚ ಗಗನಮುಖಿಯಾಗಿರುವ ಹಿನ್ನೆಲೆಯಲ್ಲಿ ಟನ್ ಕಬ್ಬಿಗೆ 5500 ರೂ. ನ್ಯಾಯಯುತ ಬೆಲೆ ನಿಗದಿ ಮಾಡಬೇಕು, ಕೇಂದ್ರ ಸರ್ಕಾರ ಎಫ್‌ಆರ್‌ಪಿ ಮತ್ತು ರಾಜ್ಯ ಸರ್ಕಾರ ಎಸ್‌ಎಪಿ ಹೆಚ್ಚಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ, ಕರ್ನಾಟಕ ರಾಜ್ಯ ರೈತಸಂಘದ ನೇತೃತ್ವದಲ್ಲಿ ನೂರಾರು ರೈತರು ಶುಕ್ರವಾರ ಗಣಂಗೂರು ಟೋಲ್ ಗೇಟ್ ಬಳಿ ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಬೃಹತ್ ಪ್ರತಿಭಟನೆ ನಡೆಸಿದರು.

ಪೊಲೀಸರು-ರೈತರ ನಡುವೆ ಮಾತಿನ ಚಕಮಕಿ: ಕರ್ನಾಟಕ ರಾಜ್ಯ ರೈತಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ, ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಮತ್ತು ಜಿಲ್ಲಾಧ್ಯಕ್ಷ ಎ.ಎಲ್.ಕೆಂಪೂಗೌಡ ಅವರ ನೇತೃತ್ವದಲ್ಲಿ ರಸ್ತೆಗಿಳಿದ ರೈತರು ಹೆದ್ದಾರಿಯಲ್ಲಿ ಕುಳಿತು ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಶಾಂತಿಯುತ ಪ್ರತಿಭಟನೆ ನಡೆಸುವಂತೆ ಪೊಲೀಸರು ಮನವಿ ಮಾಡಿದರೂ, ರೈತರನ್ನು ವಶಕ್ಕೆ ಪಡೆಯಲು ಮುಂದಾದಾಗ ಪೊಲೀಸರು ಮತ್ತು ರೈತರ ನಡುವೆ ಮಾತಿನ ಚಕಮಕಿ ನಡೆಯಿತು.

ಬೆಲೆ ನಿಗದಿ ಮಾನದಂಡ ಪರಿಷ್ಕರಣೆಗೆ ಆಗ್ರಹ: ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ರಾಜ್ಯ ಸರ್ಕಾರದ ಮಟ್ಟದಲ್ಲಿ ಹಲವು ಬಾರಿ ಮನವಿ ಸಲ್ಲಿಸಲಾಗಿದ್ದರೂ ಪ್ರಯೋಜನವಾಗಿಲ್ಲ ಎಂದು ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು. ಕಬ್ಬಿನ ಇಳುವರಿ ಆಧರಿಸಿ ಬೆಲೆ

ನಿಗದಿಪಡಿಸುವ ಪ್ರಸ್ತುತ ಮಾನದಂಡದಿಂದ ರೈತರಿಗೆ ಅನ್ಯಾಯವಾಗುತ್ತಿದೆ. ರಸಗೊಬ್ಬರ ಸೇರಿದಂತೆ ಉತ್ಪಾದನಾ ವೆಚ್ಚ ಹೆಚ್ಚಾಗಿದ್ದರೂ ಬೆಲೆ ಹೆಚ್ಚಳವಾಗಿಲ್ಲ. ಹೀಗಾಗಿ ಮಾನದಂಡ ಪರಿಷ್ಕರಿಸಿ ಟನ್‌ಗೆ 5500 ರೂ. ನೀಡಬೇಕು. ತಮಿಳುನಾಡು ಮಾದರಿಯಲ್ಲಿ ಟನ್‌ಗೆ 840 ರೂ. ಹೆಚ್ಚುವರಿ ಪ್ರೋತ್ಸಾಹಧನ ನೀಡಬೇಕು ಮತ್ತು ಎಫ್‌ಆರ್‌ಪಿ ಜೊತೆಗೆ ರಾಜ್ಯ ಸರ್ಕಾರ ಹೆಚ್ಚುವರಿ ಮೊತ್ತ ಸೇರಿಸಿ ಪಾವತಿಸಲು ಕಾನೂನು ರೂಪಿಸಬೇಕು ಎಂದು ಆಗ್ರಹಿಸಿದರು.

ಟೋಲ್‌ನಿಂದ ಮೈದಾನಕ್ಕೆ ಶಿಫ್ಟ್, ಮತ್ತೆ ಹೆದ್ದಾರಿಗೆ ನುಗ್ಗಿದ ರೈತರು ಪೊಲೀಸರು ಟೋಲ್‌ಗೆ ಮುತ್ತಿಗೆ ಹಾಕದೆ ಶಾಂತಿಯುತ ಪ್ರತಿಭಟನೆಗೆ ಸಲಹೆ ನೀಡಿ, ರೈತರನ್ನು ಟೋಲ್ ಪಕ್ಕದ ಸರ್ವಿಸ್ ರಸ್ತೆ ಮೈದಾನಕ್ಕೆ ಶಿಫ್ಟ್ ಮಾಡಿದರು. ಸಚಿವರ ಜೊತೆ ಮಾತುಕತೆ ನಡೆಸುವಂತೆ ಮನವೊಲಿಸಲು ಮುಂದಾದಾಗ, ನಮ್ಮನ್ನು ಪ್ರಾಣಿಗಳಂತೆ ಮೈದಾನದಲ್ಲಿ ಕೂಡಿಹಾಕಿದ್ದೀರಿ ಎಂದು ರೈತರು ಎಸ್ಪಿ ಡಾ.ಶೋಭಾರಾಣಿ ಅವರೊಂದಿಗೆ ಮಾತಿನ ಚಕಮಕಿ ನಡೆಸಿ, ತಡೆಗೋಡೆ ತಂತಿ ಬೇಲಿ ಮುರಿದು ಏಕಾಏಕಿ ಹೆದ್ದಾರಿಗೆ ನುಗ್ಗಿದರು. ಈ ವೇಳೆ ತಳ್ಳಾಟದಲ್ಲಿ ಮಹಿಳಾ ಹೋಂ ಗಾರ್ಡ್ ಕೆಳಗೆ ಬಿದ್ದು ಗಾಬರಿಗೊಂಡರು. ಶಾಸಕ ದರ್ಶನ್ ಪುಟ್ಟಣ್ಣಯ್ಯ ನೇತೃತ್ವದಲ್ಲಿ ಟೋಲ್ ಮಧ್ಯೆ ಕುಳಿತು ಬಂದ್ ಮಾಡಿದ್ದರಿಂದ ಹೆದ್ದಾರಿ ಮತ್ತು ಸರ್ವಿಸ್ ರಸ್ತೆ ಎರಡೂ ಸಂಪೂರ್ಣ ಬಂದ್ ಆಗಿ ಕಿಲೋಮೀಟರ್‌ಗಟ್ಟಲೆ ವಾಹನಗಳು ಸಾಲುಗಟ್ಟಿ ನಿಂತಿದ್ದವು.

ಸಚಿವರು, ಅಧಿಕಾರಿಗಳ ಭೇಟಿ – ಪ್ರತಿಭಟನೆ ವಾಪಸ್

ವಿಷಯ ತಿಳಿದು ಸ್ಥಳಕ್ಕೆ ದೌಡಾಯಿಸಿದ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕ ರಮೇಶ್ ಬಾಬು ಬಂಡಿಸಿದ್ದೇಗೌಡ, ಜಿಲ್ಲಾಧಿಕಾರಿ ಡಾ.ಕುಮಾರ ಅವರು ರೈತರ ಮನವಿ ಸ್ವೀಕರಿಸಿ, ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದರು. ಬಳಿಕ ರೈತರು ಪ್ರತಿಭಟನೆ ಹಿಂಪಡೆದರು. ಭದ್ರತೆಗಾಗಿ ಐಜಿಪಿ ಬೋರಲಿಂಗಯ್ಯ ಅವರು ಸ್ಥಳಕ್ಕೆ ಭೇಟಿ ನೀಡಿ ಉಸ್ತುವಾರಿ ವಹಿಸಿದ್ದರು. ಸ್ಥಳದಲ್ಲಿ ಮಂಡ್ಯ ಎಸ್ಪಿ ಶೋಭಾರಾಣಿ ಮತ್ತು ಮೈಸೂರು ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಮೊಕ್ಕಾಂ ಹೂಡಿದ್ದರು.

56% ಮೀಸಲಾತಿಯನ್ನು ಸಂವಿಧಾನದ 9ನೇ ಶೆಡ್ಯೂಲ್‌ಗೆ ಸೇರಿಸಿ ರಕ್ಷಣೆ ನೀಡಿ, ಇಲ್ಲದಿದ್ದರೆ ಉಗ್ರ ಹೋರಾಟ: ವೆಂಕಟಗಿರಿಯಯ್ಯ ಎಚ್ಚರಿಕೆ

ಮಂಡ್ಯ: ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ದಲಿತ ಹಿಂದುಳಿದ ವರ್ಗಗಳ ಹಿತ ರಕ್ಷಿಸುವ ಜವಾಬ್ದಾರಿ ಇರುವುದರಿಂದ 56% ಮೀಸಲಾತಿಗಾಗಿ ಸುಪ್ರೀಂ ಕೋರ್ಟಿಗೆ ಮನವರಿಕೆ ಮಾಡಿ ತಡೆಯಾಜ್ಞೆ ತರಬೇಕು. ಇಲ್ಲವೇ ತತ್‌ಕ್ಷಣ ಸುಗ್ರೀವಾಜ್ಞೆ ಜಾರಿ ಮಾಡಬೇಕು. ಕೇಂದ್ರ ಸರ್ಕಾರದ ಪ್ರಧಾನಿ ನರೇಂದ್ರ ಮೋದಿಯವರನ್ನು ಮನವೊಲಿಸಿ ಪ್ರಸ್ತುತ ರಾಜ್ಯದ ಶೇ.56ರ ಮೀಸಲಾತಿ ಪ್ರಮಾಣವನ್ನು ಸಂವಿಧಾನದ 9ನೇ ಶೆಡ್ಯೂಲ್‌ಗೆ ಅಳವಡಿಸಿ ಸಾಂವಿಧಾನಿಕ ರಕ್ಷಣೆ ನೀಡುವಂತೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳನ್ನು ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ವೆಂಕಟಗಿರಿಯಯ್ಯ ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ವಿರುದ್ಧ ವಾಗ್ದಾಳಿ ನಡೆಸಿ ನ್ಯಾಯ ವಿರೋಧಿಗಳು ನ್ಯಾಯಾಲಯದಲ್ಲಿ ಪ್ರಶ್ನಿಸಿದರೆ, ನ್ಯಾಯಾಲಯಗಳೂ ಕೂಡ ಸಂವಿಧಾನ ಬಾಹಿರವಾಗಿ ತೀರ್ಪು ನೀಡಿರುವುದು ದುರಂತದ ಸಂಗತಿಯಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರ ಸರ್ಕಾರ ಶೇ.56ರ ಮೀಸಲಾತಿ ಪ್ರಮಾಣವನ್ನು ತಮಿಳುನಾಡು, ಪಂಜಾಬ್ ಸರ್ಕಾರಗಳಂತೆ ಅಳವಡಿಸಬೇಕಿರುವ ಇವರು ಸಾಂವಿಧಾನಿಕ ರಕ್ಷಣೆ ನೀಡದೆ ಕೈ ಚೆಲ್ಲಿರುವುದು ದುರದೃಷ್ಟಕರ. ಇದು ಶೋಷಿತ ಸಮುದಾಯಕ್ಕೆ ಅನಿವಾರ್ಯವಾಗಿದೆ.ಪ್ರಸ್ತುತ ರಾಜ್ಯ ಕಾಂಗ್ರೆಸ್ ಸರ್ಕಾರ ಕೂಡ ಕರ್ನಾಟಕ ಹೈಕೋರ್ಟಿನ ಮುಂದಿನ ವಿಚಾರಣೆಯನ್ನು ಗಂಭೀರವಾಗಿ ಪರಿಗಣಿಸದೇ, ರಾಜ್ಯ ಸರ್ಕಾರ ತನ್ನ ನಿಲುವನ್ನು ಸಮರ್ಥಿಸುವಲ್ಲಿ ಸಂಪೂರ್ಣ ವಿಫಲವಾಗಿರುವುದು ಎಸ್ಸಿ, ಎಸ್ಟಿ ಹಾಗೂ ಶೋಷಿತ ಸಮುದಾಯಗಳ ಮೇಲಿನ ನಿರ್ಲಕ್ಷ್ಯ ಈಗ ಬಟಾಬಯಲಾಗಿದೆ ಎಂದರು.

ಇಂತಹ ಅಸಂವಿಧಾನಿಕವಾದ ಸುಪ್ರೀಂ ಕೋರ್ಟ್ ತೀರ್ಪು, ಹೈಕೋರ್ಟ್ ತೀರ್ಪುಗಳು ಸಂಸತ್ ಮತ್ತು ವಿಧಾನ ಮಂಡಲದ ಅಧಿಕಾರ ವ್ಯಾಪ್ತಿಯಲ್ಲಿ ಅತಿಕ್ರಮಣ ಮಾಡುತ್ತಿರುವ ಬಗ್ಗೆ ಕಾಂಗ್ರೆಸ್-ಬಿಜೆಪಿ ಸರ್ಕಾರಗಳು ಪ್ರಶ್ನಿಸದೆ ಜಾಣ ಮೌನ ತಾಳುವ ಮೂಲಕ ಪರೋಕ್ಷ ಬೆಂಬಲಕ್ಕೆ ನಿಂತಿರುವುದನ್ನು ತೀವ್ರವಾಗಿ ಖಂಡಿಸುತ್ತೇವೆ.

ಇದರ ವಿರುದ್ಧ ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯಾದ್ಯಂತ ತೀವ್ರತರದ ಗಂಭೀರ ಚಳುವಳಿಯನ್ನು ರಾಜ್ಯ ಕಾಂಗ್ರೆಸ್ ಮತ್ತು ಕೇಂದ್ರದ ಬಿಜೆಪಿ ಸರ್ಕಾರಗಳು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಎಐಬಿಎಸ್‌ಪಿ ಜಿಲ್ಲಾಧ್ಯಕ್ಷ ಅನಿಲ್‌ಕುಮಾರ್ ಕೆ.ಎಂ, ಜಿಲ್ಲಾಧ್ಯಕ್ಷ ಬಿ.ಆನಂದ್, ಜಿಲ್ಲಾ ಸಂ. ಕಾರ್ಯದರ್ಶಿ ಸುರೇಶ್ ಕುಮಾರ್, ಜಿಲ್ಲಾಧ್ಯಕ್ಷ ಅಶ್ವಥ್ ಜೋಕನಹಳ್ಳಿ, ತಾ.ಅಧ್ಯಕ್ಷ ಮುತ್ತರಾಜು ನಗರಕೆರೆ, ತಾ.ಅಧ್ಯಕ್ಷ ಸ್ವಾಮಿ ಎಲೆಚಾಕನಹಳ್ಳಿ, ಗೀತಾ ಶ್ರೀರಂಗಪಟ್ಟಣ ಸೇರಿದಂತೆ ಹಲವರು ಹಾಜರಿದ್ದರು.

ಅ.26 ರಂದು ಮಹರ್ಷಿ ವಾಲ್ಮೀಕಿ ಜಯಂತಿ

ಮಡಿಕೇರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಸಮಾರಂಭವು ಅಕ್ಟೋಬರ್, 26 ರಂದು ಬೆಳಗ್ಗೆ 10.30 ಗಂಟೆಗೆ ನಗರದ ಗಾಂಧಿ ಭವನದಲ್ಲಿ ನಡೆಯಲಿದೆ.

ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಪಿ.ಎಂ.ನರೇಂದ್ರ ಸ್ವಾಮಿ, ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಮಂತರ್ ಗೌಡ, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಹಾಗೂ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎ.ಎಸ್.ಪೊನ್ನಣ್ಣ, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ರಾಜ್ಯಸಭಾ ಸದಸ್ಯರಾದ ಅಜಯ್ ಮಾಕನ್, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್.ಮೆಹರೋಜ್ ಖಾನ್, ಇತರರು ಪಾಲ್ಗೊಳ್ಳಲಿದ್ದಾರೆ.

ಸಾಂವಿಧಾನಿಕ ಹುದ್ದೆಯಲ್ಲಿ ಇರುವವರು ಘನತೆಯಿಂದ ಮಾತನಾಡಬೇಕು

ಕುಮಾರಸ್ವಾಮಿ ಪಾಳೇಗಾರಿಕೆ ನಿಂದನೆಗೆ ಖಂಡನೆ, ಅನ್ನದಾನಿ ಹೇಳಿಕೆಗೆ ಮಂಜುನಾಥ್ ತಿರುಗೇಟು

ಮಂಡ್ಯ: ಇತ್ತೀಚೆಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪಾಳೇಗಾರಿಕೆ ನಿಂದನೆಯ ಮಾತುಗಳನ್ನು ಆಡಿರುವುದನ್ನು ಹಾಗೂ ಕುಮಾರಸ್ವಾಮಿಯವರ ಸಮರ್ಥನೆಗೆ ಇಳಿದಿರುವ ಮಾಜಿ ಶಾಸಕ ಕೆ.ಅನ್ನದಾನಿ ಹೇಳಿಕೆಗೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವಕೀಲ ಸುಂಡಹಳ್ಳಿ ಮಂಜುನಾಥ್ ತಿರುಗೇಟು ನೀಡಿದರು.

ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಇತ್ತೀಚೆಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ತನಿಖೆಯಲ್ಲಿ ತಮ್ಮ ಹೆಸರು ಬಂದರೆ ಕಾನೂನಿಗೆ ಒಳಪಡುತ್ತೇನೆ ಎನ್ನದೆ, ಗೃಹ ಸಚಿವ ಪ್ರಿಯಾಂ

ಬೌದ್ಧ ಸಮ್ಮೇಳನದ ಯಶಸ್ಸಿಗೆ ಸಹಕರಿಸಿ: ಸಚಿವ ಸಿ.ಪುಟ್ಟರಂಗಶೆಟ್ಟಿ

ಚಾಮರಾಜನಗರ, ಜಿಲ್ಲೆಯಲ್ಲಿ ಅ.24 ಮತ್ತು 25 ರಂದು ನಡೆಯಲಿರುವ ಅಂತಾರಾಷ್ಟ್ರೀಯ ಬೌದ್ಧ ಮಹಾ ಸಮ್ಮೇಳನಕ್ಕೆ ಪ್ರತಿಯೊಬ್ಬರು ಭಾಗವಹಿಸುವ ಮೂಲಕ ಸಮ್ಮೇಳನದ ಯಶಸ್ಸಿಗೆ ಸಹಕರಿಸಿ ಎಂದು ರೇಷ್ಮೆ ಮತ್ತು ಪಶು ಸಂಗೋಪನೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಿ.ಪುಟ್ಟರಂಗಶೆಟ್ಟಿ ಮನವಿ ಮಾಡಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಗುರುವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಕಳೆದ ವರ್ಷ ಮೈಸೂರಿನಲ್ಲಿ ನಡೆದ ಅಂತಾರಾಷ್ಟ್ರೀಯ ಬೌದ್ಧ ಸಮ್ಮೇಳನದಲ್ಲಿ ಮುಂದಿನ ವರ್ಷ ಜಿಲ್ಲೆಯಲ್ಲಿ ಸಮ್ಮೇಳನ ಆಯೋಜಿಸುವ ಸಂಬಂಧ ಧಮ್ಮ ಜ್ಯೋತಿಯನ್ನು ಸ್ವೀಕಾರ ಮಾಡಿದ್ದೆವು.

ಅದರಂತೆ ಅ.24 ಮತ್ತು 25 ರಂದು ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಅರ್ಥಪೂರ್ಣವಾಗಿ ಬೌದ್ಧ ಸಮ್ಮೇಳನ ಆಯೋಜಿಸಲಾಗಿದೆ. ಈ ಸಮ್ಮೇಳನದ ಯಶಸ್ಸಿಗೆ ಪ್ರತಿಯೊಂದು ಸಮುದಾಯದ ಜನರು ಸಹಕಾರವನ್ನು ನೀಡಬೇಕು ಎಂದು ಹೇಳಿದರು.

ಈ ಸಮ್ಮೇಳನದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಂಬೇಡ್ಕರ್ ಮೊಮ್ಮಗ ಯಶವಂತ್ ರಾವ್ ಅಂಬೇಡ್ಕರ್, ಹಲವಾರು ಸಚಿವರು ಹಾಗೂ ಇನ್ನಿತರೆ ಗಣ್ಯರು ಭಾಗವಹಿಸಲಿದ್ದಾರೆ. ಈ ಸಮ್ಮೇಳನಕ್ಕೆ ಪ್ರತಿಯೊಂದು ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಮೈಸೂರಿನ ಉರಿಲಿಂಗಪೆದ್ದಿ ಮಠದ ಪೀಠಾಧ್ಯಕ್ಷ ಶ್ರೀ ಜ್ಞಾನ ಪ್ರಕಾಶ ಸ್ವಾಮೀಜಿ ಮಾತನಾಡಿ, ಬೌದ್ಧ ಸಮ್ಮೇಳನಕ್ಕೆ ಹಲವಾರು ದೇಶಗಳಿಂದ ಬೌದ್ಧ ಬಿಕ್ಕುಗಳು ಆಗಮಿಸಲಿದ್ದಾರೆ. ಅದಲ್ಲದೇ ರಾಜ್ಯದ ವಿವಿಧ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಭೇಟಿ ನೀಡಲಿದ್ದಾರೆ. ಈ ನಿಟ್ಟಿನಲ್ಲಿ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಸ್ಥಳೀಯ ಆಡಳಿತ ಅಗತ್ಯ ಸಹಕಾರವನ್ನು ನೀಡಬೇಕು ಎಂದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ಬೌದ್ಧ ಸಮ್ಮೇಳನದ ಅಂಗವಾಗಿ ಕೊಳ್ಳೇಗಾಲದಿಂದ ಕಾರ್ಯಕ್ರಮ ನಡೆಯುವ ಜಿಲ್ಲಾ ಕ್ರೀಡಾಂಗಣದವರೆಗೆ ಬೌದ್ಧ ಬಿಕ್ಕುಗಳ ನೇತೃತ್ವದಲ್ಲಿ ಕಾಲ್ನಡಿಗೆ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ. ಸಮ್ಮೇಳನದ ಮುಖ್ಯದ್ವಾರದ ಅನಾವರಣ ಮಾಡಲಾಗುತ್ತಿದ್ದು, ಜಿಲ್ಲಾ ಕ್ರೀಡಾಂಗಣದಲ್ಲಿ ಸಮ್ಮೇಳನಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಸಾರ್ವಜನಿಕರು ಸಮ್ಮೇಳನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಗೋಷ್ಠಿಯಲ್ಲಿ ಬೌದ್ಧ ಸಮ್ಮೇಳನ ಆಚರಣಾ ಸಮಿತಿಯ ವೆಂಕಟರಮಣಸ್ವಾಮಿ(ಪಾಪು), ಮಹೇಶ್ ಕುದರ್, ಎನ್.ನಾಗಯ್ಯ, ಅಯ್ಯನಪುರ ಶಿವಕುಮಾರ್, ಕಾಗಲವಾಡಿ ಚಂದ್ರು ಹಾಜರಿದ್ದರು.